ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ರಾಯಚೂರಿನಿಂದ ರಾಜ್ಯದವರೆಗೆ

ಕನ್ನಡದಿನ ಪತ್ರಿಕೆ

KANNADA MATHRUBHOOMI
KANNADA DAILY PAPER

ಸಂಪಾದಕರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

mathrubhoomircr@gmail.com
Call : 9886635117

ಸಂಪುಟ : 03 Volume : 03 | ಸಂಚಿಕೆ 180 Issue : 180 | ದಿನಾಂಕ : 30-04-2026 Date : 30-04-2026 | ಗುರುವಾರ Thursday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : 04 Pages : 04 | ರೂ 2 Rs. 2

## ಜಲಜೀವನ್ ಯೋಜನೆ: ರಾಜ್ಯದಲ್ಲಿ 88.06 ಲಕ್ಷ ಮನೆಗಳಿಗೆ ನಳಸಂಪರ್ಕ-ಕೇಂದ್ರಕ್ಕೆ ಸಿಎಂ ಮಾಹಿತಿ



■ ಸಮಯ ನಿರಂತರ

**ಬೆಂಗಳೂರು,ಏ.29**-ಕೇಂದ್ರ ಜಲಶಕ್ತಿ ಸಚಿವಾಲಯ ಹಾಗೂ ಗ್ರಾಮೀಣಾ ಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಜಲಜೀವನ್ ಮಿಷನ್ 2.0 ಸಂಬಂಧಿಸಿದ ತಿಳುವಳಿಕೆ ಪತ್ರಕ್ಕೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಮು ಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೃಷ್ಣಾ ದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿದರು.

ವಿಡಿಯೋ ಸಂವಾದದಲ್ಲಿ ಮಾತನಾಡಿದ ಸಿಎಂ, ಕರ್ನಾಟಕದಲ್ಲಿ ನೀರಿಗಾಗಿ ಪರದಾ ಟದಾಡುತ್ತಿದೆ. ರಾಜ್ಯದ ಹಲವು ಭಾಗಗಳಲ್ಲಿ ಆರ್ಸೆನಿಕ್ ಹಾಗೂ ಫ್ಲೋರೈಡ್ ಮಿಶ್ರಣದ ಸಮಸ್ಯೆಯಿದೆ.

➘ 4

■ ಮುಖ್ಯ ಅಂಶಗಳು
- ಜಲಜೀವನ್ ಮಿಷನ್ 2.0 ಕಾರ್ಯಕ್ರಮದಲ್ಲಿ ಸಿಎಂ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಣೆ
- ರಾಜ್ಯದಲ್ಲಿ ನೀರಿನ ಕೊರತೆ, ಆರ್ಸೆನಿಕ್ ಫ್ಲೋರೈಡ್ ಸಮಸ್ಯೆ ಬಗ್ಗೆ ಆತಂಕ ವ್ಯಕ್ತಪಡನೆ
- ಪ್ರತೀ ಗ್ರಾಮೀಣ ಕುಟುಂಬಕ್ಕೆ ಸುರಕ್ಷಿತ ಕುಡಿಯುವ ನೀರು ಒದಗಿಸುವ ಗುರಿ
- 101.31 ಲಕ್ಷ ಕುಟುಂಬಗಳಲ್ಲಿ 88.06 ಲಕ್ಷ ಮನೆಗಳಿಗೆ ನಳಸಂಪರ್ಕ
- ಒಟ್ಟು ಪ್ರಗತಿ: 86.93% ಸಾಧನೆ

■ ಕಾಮಗಾರಿಗಳ ಸ್ಥಿತಿ
- ಒಟ್ಟು 66,344 ಕಾಮಗಾರಿಗಳು ಆರಂಭ
- 48,789 ಕಾಮಗಾರಿಗಳು ಪೂರ್ಣ
- 28,809 ಗ್ರಾಮಗಳಲ್ಲಿ
- 19,980 ಶಾಲೆ ಅಂಗನವಾಡಿಗಳಲ್ಲಿ

## ಕೋವಿಡ್ ವೇಳೆ ಅಕ್ರಮ: ತನಿಖೆಗೆ ನೀಡಿದ್ದ ತಡೆ ತೆರವುಗೊಳಿಸಲು ನಿರಾಕರಿಸಿದ ಹೈಕೋರ್ಟ್

**ಬೆಂಗಳೂರು,ಏ.29**-ಕೋವಿಡ್-19 ಸಂದರ್ಭದಲ್ಲಿ ಪಿಪಿಇ ಕಿಟ್ ಹಾಗೂ ಕೆಲವು ವೈದ್ಯಕೀಯ ಉಪಕರಣ ಗಳ ಖರೀದಿಯಲ್ಲಿ ನಡೆದಿದೆ ಎನ್ನಲಾದ 167 ಕೋಟಿ ರೂ. ಹಗರಣ ಸಂಬಂಧ ಆರೋಪಿತರ ವಿರುದ್ಧ ಬಲವಂತದ ಕ್ರಮ ಜರುಗಿಸದಂತೆ ಮತ್ತು ದೋ ಷಾರೂಪ ಪಟ್ಟಿ ಸಲ್ಲಿಸದಂತೆ ಈ ಹಿಂದೆ ನೀಡಿದ್ದ ಮಧ್ಯಂತರ ಆದೇಶವನ್ನು ತೆರವುಗೊಳಿಸಲು ಹೈಕೋ ರ್ಟ್ ನಿರಾಕರಿಸಿದೆ.

ಹಗರಣದ ಆರೋಪ ಸಂಬಂಧ ವೈದ್ಯಕೀಯ ಶಿಕ್ಷಣ ಇಲಾಖೆಯ ಮುಖ್ಯ ಲೆಕ್ಕಾಧಿಕಾರಿ ಮತ್ತು ಹಣಕಾಸು ಸಲಹೆಗಾರ ಡಾ. ವಿಷ್ಣುಪ್ರಸಾದ್ ಅವರು 2024ರ ಡಿ.12ರಂದು ನೀಡಿದ್ದ ದೂರಿನ ಆಧಾರದಲ್ಲಿ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎಫ್.ಐ.ಆರ್ ಮತ್ತು ಅದಕ್ಕೆ ಸಂಬಂಧಿಸಿದ ವಿಚಾರಣಾ ಪ್ರಕ್ರಿಯೆ

➘ 4

## ಆಸ್ತಿ ವಿಚಾರಕ್ಕೆ ಜಗಳ: ಅಣ್ಣನ ಮಗನನ್ನೆ ಕೊಂದ ಚಿಕ್ಕಪ್ಪ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.29**-ಆಸ್ತಿ ವಿಚಾರಕ್ಕೆ ಸಂಬಂಧಿಸಿದಂತೆ ಸ್ವಂತ ಅಣ್ಣನ ಮಗನನ್ನೆ ಚಾಕುವಿನಿಂದ ಇರಿದು ಕೊಲೆ ಮಾಡಿ, ಅತ್ತಿಗೆಗೆ ಕೊಲೆ ಮಾಡಲು ಯತ್ನಿಸಿದ ಘಟನೆ ಬುಧವಾರ ಬೆಳಗ್ಗೆ ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ನಡೆದಿದೆ.



ಆರೋಪಿ ಬಸವರಾಜ್

ನಾಗರಾಜ ಸಿದ್ದಪ್ಪ ಆಲ್ವಿ (12) ಕೊಲೆಯಾದ ಬಾಲಕನಾಗಿದ್ದು, ಅಮೃತಾ ಸಿದ್ದಪ್ಪ (42) ತೀವ್ರವಾಗಿ ಗಾಯಗೊಂಡಿದ್ದಾರೆ. ಮೃತ ವ್ಯಕ್ತಿಯ ಚಿಕ್ಕಪ್ಪ ಬಸವರಾಜ ರುದ್ರಪ್ಪ ಆಲ್ವಿ ಕೊಲೆ ಮಾಡಿದ ವ್ಯಕ್ತಿಯಾಗಿದ್ದಾನೆ.

ಮಂಗಳವಾರ ಅಲಬನೂರು ಗ್ರಾಮಕ್ಕೆ ಬಂದ ಕೊಲೆಗೈದ ವ್ಯಕ್ತಿ ಬಸವರಾಜ ತನ್ನ ತಾಯಿಯ ಮನೆಯಲ್ಲಿದ್ದು, ಬುಧವಾರ ಅದೇ ಗ್ರಾಮದ ತನ್ನ ಸಹೋದರ ಸಿದ್ದಪ್ಪನ ಮನೆಗೆ ಚಾಕು ಸಹಿತ ತೆರಳಿದ್ದಾನೆ. ಮನೆಯಲ್ಲಿ ಸಿದ್ದಪ್ಪ ಹೆಂಡತಿ ಅಮೃತಾ, ಮಕ್ಕಳಾದ ನಾಗರಾಜ ಮತ್ತು ಧನುಷ್ ಇದ್ದು, ಅತ್ತಿಗೆ ಮತ್ತು ಮಕ್ಕಳ ಮೇಲೆ ಚಾಕುವಿನಿಂದ ಕೊಲೆ ಮಾಡಲು ಯತ್ನಿಸಿದ್ದು, ಘಟನೆಯಲ್ಲಿ ನಾಗರಾಜ ಎನ್ನುವ ಬಾಲಕ ಸಾವನ್ನಪ್ಪಿದ್ದು, ಅಮೃತಾ ಮತ್ತು ಧನುಷ್ ಎನ್ನುವವರಿಗೆ ಗಂಭೀರ ಗಾಯಗಳಾಗಿದ್ದು, ನಗರದ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗೆ ಕರೆತರಲಾಗಿದೆ.

ಘಟನಾ ಸ್ಥಳಕ್ಕೆ ಡಿವೈಎಸ್ಪಿ ಜಿ.ಚಂದ್ರಶೇಖರ ಭೇಟಿ ನೀಡಿ ಮಾಹಿತಿ ಪಡೆದುಕೊಂಡಿದ್ದಾರೆ. ಅಲಬನೂರು ಗ್ರಾಮದ ಚಿನ್ನಮ್ಮ ರುದ್ರಪ್ಪ ಎನ್ನುವ ಮಹಿಳೆಗೆ ಸಿದ್ದಪ್ಪ ಹಾಗೂ ಬಸವರಾಜ ಎನ್ನುವ ಇಬ್ಬರು ಪುತ್ರರಿದ್ದು, ಸಿದ್ದಪ್ಪ ಎನ್ನುವ ಅಲಬನೂರು ಗ್ರಾಮದಲ್ಲಿ ವಾಸವಿದ್ದು, ಇನ್ನೋರ್ವ ಪುತ್ರ ಬಸವರಾಜ ಎನ್ನುವವರ ಸಿರುಗುಪ್ಪ ತಾಲ್ಲೂಕಿನ ಅಳ್ಳಿಗನೂರು ಗ್ರಾಮದಲ್ಲಿ ವಾಸಿಸುತ್ತಿದ್ದಾನೆ. ಇಬ್ಬರು ಸಹೋದರರ ನಡುವಿನ ಆಸ್ತಿ ವಿಚಾರ ಹಿರಿಯ ಸಹೋದರ ಸಿದ್ದಪ್ಪನ ಮಗ ನಾಗರಾಜ ಸಾವಿನಲ್ಲಿ ಅಂತ್ಯಗೊಂಡಿದೆ.

## ಖರ್ಗೆ ಸಿಎಂ ಪ್ರಶ್ನೆ ಹೈಕಮಾಂಡ್ ನಿರ್ಧಾರಕ್ಕೆ ಅವಲಂಭಿತ: ಯತೀಂದ್ರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.29**-ಮಲ್ಲಿಕಾರ್ಜುನ ಖರ್ಗೆ ಮುಖ್ಯ ಮಂತ್ರಿಯಾಗುವ ವಿಚಾರ ಹೈಕಮಾಂಡ್ ತೀರ್ಮಾನಕ್ಕೆ ಸಂಬಂಧಿಸಿದ್ದು, ಸದ್ಯ ಆ ಪ್ರಶ್ನೆ ಉದ್ಭವಿಸುವ ಸ್ಥಿತಿ ಇಲ್ಲ ಎಂದು ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ಮದುವೆ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರು ಖರ್ಗೆ ಸಿಎಂ ಆದ್ರೆ ಸ್ವಾಗತ ಎಂದಿರುವ ಹೇಳಿಕೆಗೆ ಪ್ರತಿಕ್ರಿಯಿಸಿ, ಈ ಬಗ್ಗೆ ಸ್ಪಷ್ಟನೆ ನೀಡಿ, ಸಿಎಂ ಸಿದ್ದರಾಮಯ್ಯರನ್ನು ಹೈಕಮಾಂಡ್ ಇಳಿಸಿದರೆ ಮಾತ್ರ ಆ ಪ್ರಶ್ನೆ ಬರುತ್ತೆ. ಆ ರೀತಿಯ ಬೆಳವಣಿಗೆ ನಡೆದರೆ



ಖಂಡಿತ ಮಾತನಾಡ್ತೇನೆ. ಹೈಕಮಾಂಡ್ ಯಾವ ತೀರ್ಮಾನ ತೆಗೆದುಕೊಳ್ಳುತ್ತದೋ ಅದನ್ನು ನಾವು ಸ್ವಾಗತ ಮಾಡ್ತೇವೆ ಎಂದು ಅವರು ಹೇಳಿದರು.

ಇದೀಗ ರಾಜ್ಯ ರಾಜಕೀಯದಲ್ಲಿ ಅಂತಹ ಯಾವುದೇ ಪರಿಸ್ಥಿತಿ ಇಲ್ಲ. ಹೈಕಮಾಂಡ್ ಮಟ್ಟದಲ್ಲಿ ಏನೇ ತೀರ್ಮಾ ನವಾದರೂ ನಾವು ಅದರ ಹಿಂದೆ ನಿಲ್ಲುತ್ತೇವೆ ಎಂದು ಹೇಳಿದರು.

ಮೇ.15ರ ಕ್ರಾಂತಿ ವಿಚಾರಕ್ಕೆ ಪ್ರತಿಕ್ರಿಯಿಸಲು ನಿರಾಕರಿಸಿದ ಅವರು, ಈ ಬಗ್ಗೆ ಈಗಾಗಲೇ ಸಾಕಷ್ಟು ಹೇಳಿದ್ದೇನೆ. ಇನ್ನೇನು ಹೇಳುವುದಿಲ್ಲ. ಈ ಪ್ರಶ್ನೆಗಳಿಗೆ ಹೈಕಮಾಂಡ್ ಅಥವಾ ಸಿಎಂ ಸಿದ್ದರಾಮಯ್ಯರನ್ನು ಕೇಳಿ ಎಂದು ತಿಳಿಸಿದರು.

➘ 4

## ವಿಶೇಷ ವಿವಾಹ ಕಾಯಿದೆಯಡಿ ವಿವಾಹವಾಗದಿದ್ದಲ್ಲಿ ವಿಚ್ಛೇದನಕ್ಕೆ ಮದುವೆ ನೋಂದಣಿಯ ಅಗತ್ಯವಿಲ್ಲ: ಹೈಕೋರ್ಟ್

**ಬೆಂಗಳೂರು,ಏ.29**-ವಿಶೇಷ ವಿವಾಹ ಕಾಯಿದೆಯಡಿ ಮದುವೆಯಾಗಿದ್ದಲ್ಲಿ ವಿಚ್ಛೇದನ ಪಡೆಯಲು ಕೋರಿ ಅರ್ಜಿ ಸಲ್ಲಿಸುವುದಕ್ಕೆ ಮದುವೆಯ ನೋಂದಣಿಯಾಗ ಬೇಕು ಎನ್ನವುದು ಕಡ್ಡಾಯ ನಿಯಮವಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಕುಟುಂಬ ನ್ಯಾಯಾಲಯವು ನೀಡಿದ್ದ ಆದೇಶವನ್ನು ಪ್ರಶ್ನಿಸಿ ಪತ್ನಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಾ.ಕೆ.ಮನ್ಮಥರಾವ್ ಅವರಿದ್ದ ಏಕಸದಸ್ಯ ಪೀಠ ಈ ಆದೇಶ ನೀಡಿದ್ದು, ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

ವಿಶೇಷ ಮದುವೆ ಕಾಯ್ದೆಯಲ್ಲಿ ವಿಚ್ಛೇದನ ಅರ್ಜಿ ಸಲ್ಲಿಸಲು ಮದುವೆ ಆಗಿರುವ ಸಂಬಂಧ ನೋಂದಣಿ ಮಾಡವುದು ಕಡ್ಡಾಯ ಎಂಬುದಾಗಿ ಹೇಳುವ ಬಗ್ಗೆ ಸ್ಪಷ್ಟತೆ ಇಲ್ಲ. ಸೆಕ್ಷನ್ 15ರಂತೆ ಮದುವೆ ನೋಂದಣಿಗೆ

➘ 4

## ಎನ್‌ಜಿಓ ಶಾಲಾ ಕಾಂಪೌಂಡ್ ನಿರ್ಮಾಣಕ್ಕೆ ಭೂಮಿ ಪೂಜೆ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.29**- ನಗರದ ನೀಲಕಂ ಠೇಶ್ವರ ಬಡಾವಣೆಯ ಎನ್‌ಜಿಓ ಕಾಲೋನಿ ಯಲ್ಲಿರುವ ಸರ್ಕಾರಿ ನೌಕರ ಗೃಹ ನಿರ್ಮಾಣ ಸಹಕಾರಿ ಸಂಘದ ಹಿರಿಯ ಪ್ರಾಥಮಿಕ ಶಾಲೆಯ ಕಾಂ ಪೌಂಡ್ ನಿರ್ಮಾಣಕ್ಕೆ ವಿಧಾನ ಪರಿಷತ್ ಸದಸ್ಯರಾದ ವಸಂತಕುಮಾರ್ ಅವರು ಪೂಜೆ ನೆರವೇರಿಸಿದರು.

ನಂತರ ಮಾತನಾಡಿ, ಸಂಘಟನೆಗಳು, ಜನಪ್ರತಿನಿಧಿಗಳು ಹಾಗೂ ಸಂಘದ ಆಡಳಿತ ಮಂಡಳಿಯ ಬಹುಮತದ ಅಭಿಪ್ರಾಯದ ಮೇರೆಗೆ ಈ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಹಲವು ವರ್ಷಗಳಿಂದ ಹರಿಜನವಾಡ, ದೇವಿನಗರ ಸೇರಿದಂತೆ ಸುತ್ತಮುತ್ತಲಿನ ಬಡಾವಣೆಗಳ ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳ

➘ 4



## ಬಿಸಿಲಿನ ತಾಪಕ್ಕೆ ನರೇಗಾ ಕೂಲಿಕಾರ ಸಾವು ಪರಿಹಾರಕ್ಕೆ ಪ್ರಾಂತ ರೈತ ಸಂಘ ಆಗ್ರಹ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.29**-ತಾಲ್ಲೂಕಿನ ಯಾಪಲ ದಿನ್ನಿ ಗ್ರಾಮದಲ್ಲಿ ಮನರೇಗಾ ಕಾಮಗಾರಿಯಲ್ಲಿ ಕೆಲಸ ಮಾಡುತ್ತಿದ್ದ ಕೂಲಿಕಾರ ಹುಸೇನಪ್ಪ ಮಡಿವಾಳ (50) ಅವರು ತೀವ್ರ ಬಿಸಿಲಿನ ತಾಪಕ್ಕೆ ಮೃತಪಟ್ಟಿದ್ದು ಮೃತರ ಕುಟುಂಬಕ್ಕೆ ಪರಿಹಾರ ನೀಡಲು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘದ ವತಿಯಿಂದ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗೆ ಮನವಿ ಸಲ್ಲಿಸಲಾಯಿತು.

ಏ.26ರಂದು ಮಧ್ಯಾಹ್ನ ಸುಮಾರು 12 ಗಂಟೆ ಸುಮಾ ರಿಗೆ ರಾಳ್ಳಕುಂಟಾ ಕೆರೆ ಅಭಿವೃದ್ಧಿ ಕಾಮಗಾರಿಯಲ್ಲಿ

➘ 4

## ಕಲಬೆರಿಕೆ ಸೇಂದಿ ಮಾರಾಟ: ಆರೋಪಿ ಬಂಧನ, 35 ಲೀಟರ್ ಸೇಂಧಿ ಜಪ್ತಿ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಏ.29**-ಅಕ್ರಮವಾಗಿ ಸಿ.ಎಚ್. ಪೌಡರ್ ಮಿಶ್ರಿತ ಕಲಬೆರಿಕೆ ಸೇಂಧಿ ಮಾರಾಟ ಮಾಡುತ್ತಿದ್ದ ವೇಳೆ ಪೋಲೀಸರು ದಾಳಿ ನಡೆಸಿ ಆರೋಪಿಯನ್ನು ಬಂಧಿಸಿ 35 ಲೀಟರ್ ಸೇಂಧಿ ಹಾಗೂ ನಗದು ಹಣವನ್ನು ಜಪ್ತಿ ಮಾಡಿದ್ದಾರೆ.

ರೈಲ್ವೆ ನಿಲ್ದಾಣದ ಹತ್ತಿರ ರೈಲ್ವೆ ಗಾರ್ಡನ್ ಮುಂದೆ ಸಾರ್ವಜನಿಕ ರಸ್ತೆಯಲ್ಲಿ ಒಬ್ಬ ವ್ಯಕ್ತಿ ಕಲಬೆರಿಕೆ ಹೆಂಡ ಮಾರಾಟ ಮಾಡುತ್ತಿರುವ ಬಗ್ಗೆ ಖಚಿತ ಮಾಹಿತಿ ಮೇರೆಗೆ ಪೋಲಿಸರು ದಾಳಿ ನಡೆಸಿ ಆರೋಪಿಯಲ್ಲಿದ್ದ ಸುಮಾರು 35 ಲೀಟರ್ ಕಲಬೆರಿಕೆ ಸೇಂಧಿ ಹಾಗೂ ಮಾರಾಟದಿಂದ ಬಂದ ನಗದು 60 ರೂ ಜಪ್ತಿ ಮಾಡಲಾಯಿತು. ಪ್ರಕರಣ ದಾಖಲಿಸಿ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈ ಕುರಿತು ಪಶ್ಚಿಮ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಸಂದರ್ಭದಲ್ಲಿ ಪಿಎಸ್‌ಐ ಮಂಜುನಾಥ ಸಿಬ್ಬಂದಿಗಳಾದ ಮೊಹಮ್ಮದ್ ಹಾಜಿ ಮತ್ತು ದುರುಗೇಶ, ರವಿರಾಜ, ಶ್ರೀಧರರೆಡ್ಡಿ, ಚಂದ್ರಶೇಖರ್, ಹನುಮೇಶ, ವಿನಾಯಕ ಇದ್ದರು.

## ಮಂಡ್ಯ: ಅಕ್ರಮ ಭ್ರೂಣ ಪತ್ತೆ, ಹತ್ಯೆ ಪ್ರಕರಣ ಮೂವರು ವೈದ್ಯರ ಬಂಧನ

**ಮಂಡ್ಯ,ಏ.29**-ಕೆ.ಆರ್.ಪೇಟೆಯ ಡಯಾಗ್ನ ಸ್ಟಿಕ್ ಸೆಂಟರ್‌ನಲ್ಲಿ ಅಕ್ರಮ ಭ್ರೂಣ ಪತ್ತೆ, ಹತ್ಯೆ ಆರೋಪದ ಮೇಲೆ ಮೂವರು ಖಾಸಗಿ ವೈದ್ಯರನ್ನು ಬಂಧಿಸಲಾಗಿದೆ. ಪಟ್ಟಣದ ಚೇತನಾ ನರ್ಸಿಂಗ್ ಹೋಮ್‌ನ ವೈದ್ಯೆ ಡಾ.ದಿವ್ಯಾ, ನಾವಿ ಡಯಾಗ್ನಸ್ಟಿಕ್ ಸೆಂಟರ್‌ನ ವೈದ್ಯ ಡಾ.ಹರ್ಷಿತ್ ಹಾಗೂ ಕುಶಾಲ್ ಡಯಾಗ್ನಸ್ಟಿಕ್ ಸೆಂಟರ್‌ನ ಡಾ. ಪರೀಶ್ ಬಂಧಿತರು.

ಪ್ರಕರಣ ಸಂಬಂಧ 31 ಬಾಲಗರ್ಭಿಣಿಯರಿಗೆ ಕಾನೂನುಬಾಹಿರವಾಗಿ ಸ್ಕ್ಯಾನಿಂಗ್ ಮಾಡಿರುವ ಆರೋಪದ ಮೇರೆಗೆ ಮೂವರು ವೈದ್ಯರನ್ನು ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಪಟ್ಟಣದ ಸರ್ಕಾರಿ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಪ್ರಿಯಾಂಕಾ ನಾಪತ್ತೆಯಾಗಿದ್ದು, ಪತ್ತೆ ಶೋಧ ನಡೆಸಲಾಗುತ್ತಿದೆ.

ಪಟ್ಟಣ ಮತ್ತು ಗ್ರಾಮಾಂತರ ಠಾಣೆಗಳಲ್ಲಿ ಒಟ್ಟು 17 ಆರೋಪಿಗಳ ವಿರುದ್ಧ 12 ಪ್ರತ್ಯೇಕ ಎಫ್‌ಐಆರ್‌ಗಳು ದಾಖಲಾಗಿವೆ. ಸರ್ಕಾರಿ ವೈದ್ಯೆ, ಮೂವರು ಖಾಸಗಿ ವೈದ್ಯರು, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ಆಶಾ ಕಾರ್ಯಕರ್ತೆ ಹಾಗೂ ಖಾಸಗಿ ವ್ಯಕ್ತಿಗಳ ವಿರುದ್ಧ ದೂರು ದಾಖಲಾಗಿದೆ.



ಲೋಕಾಯುಕ್ತ ಸಂಸ್ಥೆಯಲ್ಲೂ ಸ್ವಯಂಪ್ರೇರಿತ ಪ್ರಕರಣ ದಾಖಲಾಗಿದೆ.

ಪಟ್ಟಣದ ಎರಡು ಡಯಾಗ್ನಸ್ಟಿಕ್ ಸೆಂಟರ್‌ಗಳಲ್ಲಿ ಭ್ರೂಣಲಿಂಗ ಪತ್ತೆಗಾಗಿ ಸ್ಕ್ಯಾನಿಂಗ್ ಮಾಡಿರುವುದನ್ನು ಲೋಕಾಯುಕ್ತ ಪೊಲೀಸರು ಈಚೆಗೆ ಪತ್ತೆ ಮಾಡಿದ್ದರು. ನಾವಿ ಡಯಾಗ್ನಾಸ್ಟಿಕ್ ಸೆಂಟರ್‌ನಲ್ಲಿ 2024ನೇ ಸಾಲಿನಲ್ಲಿ 19 ಮತ್ತು 2025ನೇ ಸಾಲಿನಲ್ಲಿ 5 ಸೇರಿದಂತೆ ಒಟ್ಟು 24 ಬಾಲಗರ್ಭಿಣಿಯರಿಗೆ ಸ್ಕ್ಯಾನಿಂಗ್ ಮಾಡಲಾಗಿದೆ. ಕುಶಾಲ್ ಡಯಾಗ್ನಾಸ್ಟಿಕ್ ಸೆಂಟರ್‌ನಲ್ಲೂ 7 ಬಾಲಗರ್ಭಿಣಿಯರಿಗೆ ಸ್ಕ್ಯಾನಿಂಗ್ ಮಾಡಿರುವ ಆರೋಪವಿದೆ. ಸಾರ್ವಜನಿಕರಿಂದ ಬಂದ ದೂರು ಆಧರಿಸಿ ಉಪ ಲೋಕಾಯುಕ್ತರು ತನಿಖೆಗೆ ಆದೇಶಿಸಿದ್ದರು. ಉಪ ಲೋಕಾಯುಕ್ತ ಬಿ.ವೀರಪ್ಪರ ಆದೇಶದ ಹಿನ್ನೆಲೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದರು. ಈ ವೇಳೆ ಕೆ.ಆರ್.ಪೇಟೆಯ ಎರಡು ಖಾಸಗಿ ಡಯಾಗ್ನೋಸ್ಟಿಕ್ ಸೆಂಟರ್‌ಗಳ ಕೃತ್ಯ ಬಯಲಾಗಿತ್ತು. ಈ ಸಂಬಂಧ ಆರೋಗ್ಯ ಇಲಾಖೆ ಅಧಿಕಾರಿಗಳು ದೂರು ದಾಖಲಿಸಿದ್ದರು. ದೂರಿನ ಆಧಾರದ ಮೇಲೆ ಮೂವರು ವೈದ್ಯರನ್ನು ಇದೀಗ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮಂಡ್ಯದ ಕೆ.ಆರ್.ಪೇಟೆ ಪಟ್ಟಣ

➘ 4

## ಧಾರವಾಡ: ಗಾಂಜಾ ಪ್ರಕರಣದಲ್ಲಿ ಹಣ ಕೇಳಿದ್ದಕ್ಕೆ ಬಿಎಸ್‌ಸಿ ವಿದ್ಯಾರ್ಥಿ ಆತ್ಮಹತ್ಯೆ ಆರೋಪ-ಮೂವರು ಪೊಲೀಸರು ಅಮಾನತು

**ಧಾರವಾಡ,ಏ.29**-ಪೊಲೀಸರ ಕಿರುಕುಳ ಆರೋಪ ಹಿನ್ನೆಲೆಯಲ್ಲಿ, ವಿದ್ಯಾರ್ಥಿ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಪೊಲೀಸರನ್ನು ಅಮಾನತು ಗೊಳಿಸಲಾಗಿದೆ. ಹೆಡ್ ಕಾನ್ಸ್‌ಟೇಬಲ್ ಚಂದ್ರು ನಡುವಿನಮನಿ, ಕಿರಣ್ ಡೊಕ್ಕನವರ್ ಹಾಗೂ ಸೈಯದ್ ತಹಶೀಲ್ದಾರ್ ಸಸ್ಪೆಂಡ್ ಆದ ಪೊಲೀಸರು.

ಧಾರವಾಡದ ವಿದ್ಯಾಗಿರಿ ಠಾಣೆಯಲ್ಲಿ ಕೆಲಸ ಮಾಡುತ್ತಿದ್ದ ಮೂವರು ಪೊಲೀಸ್ ಸಿಬ್ಬಂದಿ ಅಮಾನತಾ ಗಿದ್ದು, ಧಾರವಾಡದ ಗಿರಿನಗರದ ಮನೆಯಲ್ಲಿ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಮೃತ ಆದಿತ್ಯ ಮ್ಯಾಗೇರಿ ಧಾರವಾಡದಲ್ಲಿ ಬಿಎಸ್‌ಸಿ ವ್ಯಾಸಂಗ ಮಾಡುತ್ತಿದ್ದರು.

ಮೂಲತಃ ಬಾಗಲಕೋಟೆ ಜಿಲ್ಲೆ ಬಾದಾಮಿ ತಾಲೂಕಿನ ಬೇಲೂರು ಗ್ರಾಮದ ಆದಿತ್ಯಾ ಮ್ಯಾಗೇರಿ ಎಂಬ ಯುವಕ ಆತ್ಮಹತ್ಯೆಗೆ ಶರಣಾಗಿದ್ದು, ಧಾರವಾಡದ ಕಿಟೆಲ್ ಕಾಲೇಜಿನಲ್ಲಿ ಬಿಎಸ್‌ಸಿ ಓದುತ್ತಿದ್ದ ಧಾರವಾಡದ ಗಿರಿನಗರದಲ್ಲಿ ತನ್ನ ಸ್ನೇಹಿತರೊಂದಿಗೆ



ಬಾಡಿಗೆ ರೂಮಿನಲ್ಲಿ ವಾಸವಾಗಿದ್ದ.

ಗಾಂಜಾ ಡ್ರೈವ್ ಮಾಡುವ ವೇಳೆ ಶನಿವಾರ ಮೃತ ಆದಿತ್ಯ ಸೇರಿ ಹಲವು ವಿದ್ಯಾರ್ಥಿಗಳನ್ನು ಗಾಂಜಾ ಸೇವನೆ ಆರೋಪದಡಿ ಪೊಲೀಸರು ವಶಕ್ಕೆ ಪಡೆದಿದ್ದರು. ಈ ವೇಳೆ ಆದಿತ್ಯ ಗಾಂಜಾ ಸೇವನೆ ನೆಗೆಟಿವ್ ಬಂದಿತ್ತು. ಆದರೆ ನೆಗೆಟಿವ್ ಬಂದ ಆದಿತ್ಯ ಸೇರಿದಂತೆ ಇತರ ವಿದ್ಯಾರ್ಥಿಗಳ ಬಳಿ ಪೊಲೀಸರು ಹಣ ವಸೂಲಿ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಹೀಗಾಗ್ಯಿಣ ಕೊಡುವಂತೆ ತಾಯಿ ಬಳಿ ವಿದ್ಯಾರ್ಥಿ ಕೇಳಿದ್ದ, ಆದರೆ ಹಣ ಕೊಡಲು ಅವರು ನಿರಾಕರಿಸಿದ್ದರಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ತಿಳಿದುಬಂದಿದೆ.

ರಾತ್ರಿ ತಾಯಿಗೆ ಫೋನ್ ಮಾಡಿದ್ದ ಆದಿತ್ಯ, 2 ಸಾವಿರ ರೂಪಾಯಿ ಹಣ ಕಳಿಸುವಂತೆ ಕೇಳಿದ್ದಾನೆ. ಆದರೆ ತಾಯಿ ಹಣವನ್ನು ಹಾಕಿಲ್ಲ. ಇದರಿಂದಾಗಿ ಪೊಲೀಸರು ಮತ್ತೆ ಫೋನ್ ಮಾಡುತ್ತಾರೆ ಅಂತಾ ಆತಂಕಗೊಂಡ ಆದಿತ್ಯ ತಡರಾತ್ರಿ ರೂಮಿನಲ್ಲಿಯೇ ಸಾವಿಗೆ ಶರಣಾಗಿದ್ದಾನೆ. ಈ ಸಾವಿಗೆ ಪೊಲೀಸರ ಕಿರುಕುಳವೇ ಕಾರಣ ಎಂದು ಮೃತ ಆದಿತ್ಯಾ ತಾಯಿ ಕವಿತಾ ಮ್ಯಾಗೇರಿ ಆರೋಪಿಸಿದ್ದಾರೆ. ಆದಿತ್ಯ ನೀಡಿದ ಮಾಹಿತಿ ಮೇರೆಗೆ ವಿದ್ಯಾಗಿರಿ ಠಾಣೆ ಪೊಲೀ ಸರು ಇಬ್ಬರು ಪೆಡ್ಲರ್‌ಗಳನ್ನು ಕೂಡ ಬಂಧಿಸಿ ಜೈಲಿಗಟ್ಟಿದ್ದಾರೆ. ಶನಿವಾರ ನಡೆಸಿದ್ದ ಗಾಂಜಾ ಡ್ರೈವ್ ವೇಳೆ

➘ 4

## ಎಸ್‌ಟಿ ಪ್ರಮಾಣಪತ್ರಕ್ಕಾಗಿ ತಳವಾರರಿಂದ ಮಾಡು ಇಲ್ಲವೇ ಮಡಿ ಹೋರಾಟ

# ಬೃಹತ್ ರ್‍ಯಾಲಿ, ಅನಿರ್ಧಿಷ್ಟ ಧರಣಿ ಮೂಲಕ ಕಾನೂನು ಭಂಗ ಚಳುವಳಿ..!!





**ಕನ್ನಡ ಮಾತೃ ಭೂಮಿ ವಾರ್ತೆ**

**ಕಲಬುರ್ಗಿ,** ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ತಳವಾರ್ ಸಮುದಾಯದವರಿಗೆ ಎಸ್‌ಟಿ ಪ್ರಮಾಣಪತ್ರ ಕೊಡಬೇಕು ಎಂದು ಒತ್ತಾಯಿಸಿ ತಳವಾರ್ ಸಮಾಜದವರು ಸೋಮವಾರ ನಗರದಲ್ಲಿ ಬೃಹತ್ ಮೆರವಣಿಗೆಯ ಮೂಲಕ ಜಿಲ್ಲಾಧಿಕಾರಿಗಳ ಕಚೇರಿ ಮುಂದಿನ ಮುಖ್ಯ ದ್ವಾರದ ಬಳಿ ಅನಿರ್ಧಿಷ್ಟ ಧರಣಿ ಮೂಲಕ ಮಾಡು ಇಲ್ಲವೇ ಮಡಿ ಹೋರಾಟ ಆರಂಭಿಸಿದರು.

ಡಾ. ಸರ್ದಾರ್ ರಾಯಪ್ಪ, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ನಾಟೀಕಾರ್, ಬಿಜೆಪಿ ಮುಖಂಡ ಶಾಂತಪ್ಪ ಕೂಡಿ, ಅವ್ವಣ್ಣ ಮ್ಯಾಕೇರಿ ಅವರೂ ಸೇರಿದಂತೆ ಅನೇಕ ಸ್ವಾಮೀಜಿಗಳು ಮತ್ತು ಸಾವಿರಾರು ಸಮಾಜದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ನಗರದ ಜಗತ್ ವೃತ್ತದಲ್ಲಿ ಕೆಲ ಹೊತ್ತು ಪ್ರತಿಭಟನೆ ಮಾಡಿದ ಹೋರಾಟಗಾರರು ನಂತರ ಅಲ್ಲಿಂದ ಮೆರವಣಿಗೆಯ ಮೂಲಕ ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿದರು. ಪೋಲಿಸರು ಪ್ರತಿಭಟನೆಕಾರರನ್ನು ತಡೆಯಲು ಬ್ಯಾರಿಕೇಡ್‌ಗಳನ್ನು ಹಾಕಿದ್ದು, ಆ ಬ್ಯಾರಿಕೇಡ್‌ಗಳನ್ನು ಕಿತ್ತು ಹಾಕಿದರಲ್ಲದೇ ರಸ್ತೆ ಮೇಲೆ ಆ ಬ್ಯಾರಿಕೇಡ್‌ಗಳನ್ನು ಎಸೆಯುವ ಮೂಲಕ ಸುಗಮ ಸಂಚಾರವನ್ನು ಸ್ಥಗಿತಗೊಳಿಸಿದರು.

ಪ್ರತಿಭಟನೆಕಾರರು ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ಹಾಕುವುದನ್ನು ತಡೆಯಲು ಪೋಲಿಸರು ಮುಖ್ಯ ದ್ವಾರಗಳನ್ನು ಬಂದ್ ಮಾಡಿದ್ದರು. ಹೀಗಾಗಿ ಹೋರಾಟಗಾರರು ಆ ದ್ವಾರಗಳ ಮುಂದೆಯೇ ಅನಿರ್ಧಿಷ್ಟ ಧರಣಿ ಆರಂಭಿಸಿದ್ದಾರೆ. ತಳವಾರ ಸಮಾಜದವರ ಉಗ್ರ ಹೋರಾಟದಿಂದಾಗಿ ಜಗತ್ ವೃತ್ತದಿಂದ ಸರ್ದಾರ್ ವಲ್ಲಭಬಾಯಿ ಪಟೇಲ್ ಮಾರ್ಗದವರೆಗೆ ರಸ್ತೆ ಮೇಲೆ ಯಾವುದೇ ವಾಹನಗಳು ಚಲಿಸದಂತೆ ಆಗಿದೆ. ಅಲ್ಲದೇ ವಾಹನ ಸವಾರರು ಪರ್ಯಾಯ ಮಾರ್ಗಗಳ ಮೂಲಕ ಚಲಿಸುತ್ತಿದ್ದು, ವಿವಿಧೆಡೆ ದಟ್ಟನೆಯ ವಾಹನಗಳ ಸಂಚಾರದಿಂದ ಸುಗಮ ಸಂಚಾರಕ್ಕೆ ತೀವ್ರ ತೊಂದರೆಯಾಗಿದ್ದು, ವಾಹನ ಸವಾರರು ಪರದಾಡುತ್ತಿದ್ದಾರೆ.

ಇದೇ ಸಂದರ್ಭದಲ್ಲಿ ಅನೇಕ ಮುಖಂಡರು ಮಾತನಾಡಿ, ಸಂವಿಧಾನಬದ್ಧವಾಗಿ ಎಸ್‌ಟಿ ಪ್ರಮಾಣಪತ್ರ ನೀಡುವಲ್ಲಿ ಜಿಲ್ಲಾಡಳಿತ ವಿಫಲವಾಗಿದೆ. ಇದರಿಂದಾಗಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ರೈತರು, ಉದ್ಯೋಗಸ್ಥರು ಸಾಕಷ್ಟು ಸಂಕಷ್ಟಕ್ಕೆ ಒಳಗಾಗಿದ್ದಾರೆ. ಮಾತೆತ್ತಿದರೆ ಬುದ್ಧ-ಬಸವ- ಅಂಬೇಡ್ಕರ್ ಸಂವಿಧಾನದ ಕುರಿತು ಮಾತನಾಡುವ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರು ಜಿಲ್ಲೆಯಲ್ಲಿ ಸುಮಾರು ಎರಡು ವರ್ಷಗಳಿಂದ ತಳವಾರ ಸಮುದಾಯಕ್ಕೆ ಎಸ್‌ಟಿ ಪ್ರಮಾಣಪತ್ರ ನೀಡುತ್ತಿಲ್ಲ. ಇದರಿಂಧ ಸತತ ಹೋರಾಟ ಮಾಡಲಾಗುತ್ತಿದೆ ಎಂದರು.

ರಾಜ್ಯದ ಉಳಿದ 29 ಜಿಲ್ಲೆಗಳಲ್ಲಿ ತಳವಾರರಿಗೆ ಎಸ್‌ಟಿ ಪ್ರಮಾಣಪತ್ರ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ ಮಾತ್ರ ಅದು ಕಾರ್ಯರೂಪಕ್ಕೆ ಬಂದಿಲ್ಲ. ಕಲಬುರ್ಗಿ ಜಿಲ್ಲೆಯು ದೇಶದಲ್ಲಿ ಹಾಗೂ ರಾಜ್ಯದಲ್ಲಿ ಇದೆಯೋ ಇಲ್ಲವೋ, ರಾಜ್ಯದ ಕಾನೂನು ಜಿಲ್ಲೆಗೆ ಅನ್ವಯಿಸುವುದಿಲ್ಲವೋ? ಎಂದು ಖಾರವಾಗಿ ಪ್ರಶ್ನಿಸಿದ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರದ ಆಡಳಿತದಲ್ಲಿ ಇರುವ ಸಂದರ್ಭದಲ್ಲಿ ತಳವಾರ ಸಮುದಾಯವನ್ನು ಎಸ್‌ಟಿ ಪಟ್ಟಿಯಲ್ಲಿ ಸೇರಿಸಿ ಪ್ರಮಾಣಪತ್ರ ನೀಡುವಂತೆ ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿರುವ ಉಸ್ತುವಾರಿ ಸಚಿವರು ತಮ್ಮ ಸರ್ಕಾರ ಇರುವಾಗ ಜಿಲ್ಲೆಗೆ ಮಾತ್ರ ತಳವಾರ್ ಎಸ್‌ಟಿ ಪ್ರಮಾಣಪತ್ರ ತಡೆಹಿಡಿದಿದ್ದಾಎ. ಅವರು ಕೆಲವು ಪಟ್ಟಭದ್ರ ಹಿತಾಸಕ್ತಿಗಳ ಒತ್ತಡಕ್ಕೆ ಮಣಿದಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ಎಸ್‌ಟಿ ಪ್ರಮಾಣಪತ್ರ ಕೊಡದೇ ಇರುವುದರಿಂದ ಶೈಕ್ಷಣಿಕ, ನೇಮಕಾತಿ, ಸಿಂಧುತ್ವ, ಬಡ್ತಿ, ಹಾಗೂ ಎಲ್ಲಾ ವಿಚಾರವಾಗಿ ತೊಂದರೆ ಅನುಭವಿಸುವಂತಾಗಿದೆ. ಸರ್ಕಾರದ ಸುತ್ತೋಲೆ, ಆದೇಶಗಳನ್ನು ಜಿಲ್ಲಾಧಿಕಾರಿಗಳು ಮತ್ತು ಅಧಿಕಾರಿಗಳು ಪಾಲಿಸುತ್ತಿಲ್ಲ. ರಾಜ್ಯ ಸರ್ಕಾರ 2014ರಲ್ಲಿ ಕುಲಶಾಸ್ತ್ರೀಯ ಅಧ್ಯಯನ ಕೈಗೊಂಡು 2011 ರ



ಜನಗಣತಿ ಪ್ರಕಾರ ಕಲಬುರ್ಗಿ ಜಿಲ್ಲೆಯಲ್ಲಿ ತಳವಾರ ಜಾತಿಯವರ ಜನಸಂಖ್ಯೆ 28,800 ಇರುತ್ತದೆ ಎಂದು ತಿಳಿಸಿದ್ದಾರೆ ಈ ಜನಸಂಖ್ಯೆ ಇದ್ದರೂ ಕೂಡ ಈಗ ಉದ್ದೇಶಪೂರ್ವಕವಾಗಿ ಪ್ರಮಾಣ ಪತ್ರಗಳನ್ನು ನೀಡುತ್ತಿಲ್ಲ ಎಂದು ಅವರು ಆಕ್ರೋಶ ಹೊರಹಾಕಿದರು.

ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆರವರ ಕೈಗೊಂಬೆಯಾಗಿ ಜಿಲ್ಲಾಧಿಕಾರಿಗಳು ಜಿಲ್ಲೆಯಲ್ಲಿ ತಳವಾರ ಸಮಾಜದವರಿಗೆ ಪರಿಶಿಷ್ಟ ಪಂಗಡ ಪ್ರಮಾಣ ಪತ್ರ ಹಾಗೂ ಸೌಲಭ್ಯಗಳು ಸಿಗದಂತೆ ನೋಡಿಕೊಳ್ಳುತ್ತಿದ್ದಾರೆ. ಇದರಿಂದ ತಳವಾರ ಸಮಾಜದ ಮೇಲೆ ಬಾರಿ ಪರಿಣಾಮ ಬೀಳುತ್ತಿದೆ. ಶಾಲಾ ದಾಖಲಾತಿಗಳ ಪ್ರಕಾರ ನೈಜ ತಳವಾರ ಸಮಾಜದ ಮಕ್ಕಳು ಕಾಲಾ-ಕಾಲೇಜುಗಳಲ್ಲಿ ಸಿಗುತ್ತಿರುವಂತಹ ಉಚಿತ ಹಾಸ್ಟೆಲ್ ಪ್ರವೇಶ, ವಿದ್ಯಾರ್ಥಿ ವೇತನ ಸೇರಿದಂತೆ ಸರ್ಕಾರದ ವಿವಿಧ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ. ಪ್ರಿಯಾಂಕ್ ಖರ್ಗೆ ಹಾಗೂ ಜಿಲ್ಲಾಧಿಕಾರಿಗಳ ಅವರ ಈ ಕೆಟ್ಟ ನಿರ್ಣಯದಿಂದ ಸಮಾಜದ ಮಕ್ಕಳ ಬೌದ್ಧಿಕ ಸಾಮರ್ಥ್ಯಕ್ಕೆ ಕೊಡಲಿ ಪೆಟ್ಟು ಬಿದ್ದಿದೆ ಎಂದು ಅವರು ಕಿಡಿಕಾರಿದರು.

ನವೋದಯ, ಮುರಾರ್ಜಿ ದೇಸಾಯಿ, ಕೇಂದ್ರೀಯ ವಿದ್ಯಾಲಯ ಸೇರಿದಂತೆ ಇಂಜಿನಿಯರಿಂಗ್, ಮೆಡಿಕಲ್, ಅಗ್ರಿಕಲ್ಚರ್ ನಂತಹ ಹಲ ವಾರು ಪ್ರತಿಷ್ಠಿತ ಕೋರ್ಸ್‌ಗಳ ಅಧ್ಯಯನ ದಿಂದ ಸಮಾಜದ ಮಕ್ಕಳು ಈಗಾಗಲೇ ವಂಚಿತರಾಗಿದ್ದಾರೆ.

ಇಂತಹ ಹಲವಾರು ವಿಷಯಗಳಲ್ಲಿ ಸಮುದಾಯದ ಮಕ್ಕಳಿಗೆ ಉಚಿತವಾಗಿ ಓದಲು ಇದ್ದ ಅವಕಾಶವನ್ನು ಎರಡು ವರ್ಷಗಳಿಂದ ಸಿಗದೆ ಇರುವುದರಿಂದ ತಳವಾರ ಸಮಾಜಕ್ಕೆ ಅನ್ಯಾಯವಾಗುತ್ತಿದೆ. ಇದರ ಬಗ್ಗೆ ನಿರಂತರವಾಗಿ ತಳವಾರ ಸಮಾಜದ ಜನ ಹೋರಾಟ ಮಾಡುತ್ತಿದ್ದರೂ ಸರ್ಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು ಸ್ಪಂದಿಸುತ್ತಿಲ್ಲ ಈ ಸಮಾಜವನ್ನು ಹತ್ತಿಕ್ಕುವ ಹುನ್ನಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದ ಅವರು, ಬೇಡಿಕೆ ಈಡೇರುವವರೆಗೂ ಹೋರಾಟ ಮುಂದುವರೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಪ್ರೇಮ್ ಕೋಲಿ, ಬಸವರಾಜ್ ಸಪ್ಪಣಗೋಳ್, ವಿದ್ಯಾಧರ್ ಮಂಗಳೂರ್, ದೇವಿಂದ್ರ ಮುತಕೋಡ್, ಬಸವರಾಜ್ ಗುಂಡಲಗೇರಿ, ಸೀತಾರಾಮ್ ತಳವಾರ್, ರಮೇಶ್ ಜಮಾದಾರ್, ಸಾಯಬಣ್ಣ ಜಾಲಗಾರ್, ಮಹಾರಾಯ ಅಗಸಿ, ರಾಜು ಉಕ್ಕಲಿ, ಶ್ರೀಕಾಂತ್ ದಿವಾಣಜಿ, ಮರೆಪ್ಪ ಜಮಾದಾರ್, ಪ್ರಭು ಜಮಾದಾರ್, ಮಹಾಂತೇಶ್ ಪಾಟೀಲ್, ಸತೀರ್ಶ ಬೊಮ್ಮನಹಳ್ಳಿ ಮುಂತಾದ ನೂರಾರು ನಾಯಕರು ಪಾಲ್ಗೊಂಡಿದ್ದರು. ಬಸ್, ಜೀಪ್, ಕಾರು ಹಾಗೂ ದ್ವಿಚಕ್ರವಾಹನಗಳ ಮೂಲಕ ಯಾದಗಿರಿ ಹಾಗೂ ಕಲಬುರ್ಗಿ ಜಿಲ್ಲೆಗಳಿಂದ ಆಗಮಿಸಿರುವ ಪ್ರತಿಭಟನೆಕಾರರು ಸುಡು ಬಿಸಿಲಿನಲ್ಲೂ ಲೆಕ್ಕಿಸದೇ ಅನಿರ್ಧಿಷ್ಟ ಧರಣಿ ಸತ್ಯಾಗ್ರಹ ಆರಂಭಿಸಿದ್ದು, ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣ ಗೊಂಡಿದೆ.

## ಮೇ ತಿಂಗಳಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ಆಯೋಜನೆ

**ಕನ್ನಡ ಮಾತೃ ಭೂಮಿ ವಾರ್ತೆ**

**ಕೊಪ್ಪಳ,** ಪ್ಯಾನ್ ಐಐಟಿ ಅಲ್ಯೂಮ್ನಿ ಇಂಡಿಯಾ ಅಸೋಸಿಯೇಷನ್ ಮತ್ತು ಕರ್ನಾಟಕ ಸರ್ಕಾರದ ಸಹಯೋಗದಲ್ಲಿ, ಮೇ 16ರಂದು ಬೆಂಗಳೂರಿನಲ್ಲಿ ಪ್ಯಾನ್- ಐಐಟಿ ಬೆಂಗಳೂರು ಸಮಿಟ್ 2026 ಆಯೋಜಿಸಲಾಗಿದೆ.

ತಂತ್ರಜ್ಞಾನದಲ್ಲಿನ ಸ್ವಾಯತ್ತತೆ ಎಂಬ ವಿಷಯದಡಿ ಈ ಸಮಿಟ್ ನಡೆಯಲಿದೆ ಎಂದು ಕರ್ನಾಟಕ ಸರ್ಕಾರದ ಇ-ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಅವರು ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ, ವಿಶೇಷವಾಗಿ ಬೆಂಗಳೂರು, ಇಂದು ಭಾರತದ ತಂತ್ರಜ್ಞಾನ ಮಹತ್ವಾಕಾಂಕ್ಷೆಯ ಕೇಂದ್ರಬಿಂದುವಾಗಿ ಹೊರಹೊಮ್ಮಿದೆ. ದೇಶದ ಪ್ರಮುಖ ಜಿಡಿಪಿ ಕೊಡುಗೆ ನೀಡುವ ನಗರಗಳಲ್ಲಿ ಬೆಂಗಳೂರು ಒಂದಾಗಿದ್ದು, ವೆಂಚರ್ ಕ್ಯಾಪಿಟಲ್ ಹೂಡಿಕೆಗಳ ಪ್ರಮುಖ ಕೇಂದ್ರವಾಗಿಯೂ ಗುರುತಿಸಿಕೊಂಡಿದೆ. ಸ್ಟಾರ್ಟ್‌ಅಪ್‌ಗಳ ನಿಧಿ ಸಂಗ್ರಹ ಹಾಗೂ ನವೀನ ಚಟುವಟಿಕೆಗಳಲ್ಲಿ ಮಹತ್ತರ ಪಾತ್ರವಹಿಸಿರುವುದು, ಸಾವಿರಾರು ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ವಿಶ್ವದ ಅತಿ ದೊಡ್ಡ ಪ್ರತಿಭಾ ಸಂಪನ್ಮೂಲಗಳಲ್ಲಿ ಒಂದನ್ನು ಹೊಂದಿರುವುದು. ಈ ಎಲ್ಲ ಕಾರಣಗಳಿಂದ ಬೆಂಗಳೂರು ಪೂರ್ವದ ಸಿಲಿಕಾನ್ ವ್ಯಾಲಿ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಅವರು ಹೇಳಿದರು.

ಸಾರ್ವಜನಿಕ ವಲಯ ಮತ್ತು ತಾಂತ್ರಿಕ ಕಂಪನಿಗಳ ಮೂಲಕ ಏರೋಸ್ಪೇಸ್, ರಕ್ಷಣಾ ಹಾಗೂ ಮೂಲ ಇಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಕರ್ನಾಟಕವು ಬಲವಾದ ನೆಲೆ ನಿರ್ಮಿಸಿತು. ಬಳಿಕ ಇನ್ಫೋಸಿಸ್, ಟಿಸಿಎಸ್, ಎಚ್‌ಸಿಎಲ್ ಮತ್ತು ವಿಪ್ರೋ, ಮುಂತಾದ ಐಟಿ ದಿಗ್ಗಜಗಳ ಉದಯದೊಂದಿಗೆ ಭಾರತವನ್ನು ಜಾಗತಿಕ ತಂತ್ರಜ್ಞಾನ ನಕ್ಷೆಯಲ್ಲಿ ಸ್ಥಾಪಿಸುವಲ್ಲಿ ಮಹತ್ವದ ಪಾತ್ರವಹಿಸಿದೆ ಎಂದು ಅವರು ವಿವರಿಸಿದರು.

ಪ್ರಸ್ತುತ ದೇಶವು ಡೀಪ್ ಟೆಕ್, ಕೃತಕ ಬುದ್ಧಿಮತ್ತೆ ಮತ್ತು ವೈಜ್ಞಾನಿಕ ನವೀನತೆಯ ಹಂತಕ್ಕೆ ಸಾಗುತ್ತಿದೆ. ಈ ಹಂತದಲ್ಲಿ ಅಕಾಡೆಮಿಯಾ, ಕೈಗಾರಿಕೆ ಮತ್ತು ಸರ್ಕಾರಗಳ ನಡುವಿನ ಗಟ್ಟಿಯಾದ ಸಹಕಾರ ಅತ್ಯವಶ್ಯಕವಾಗಿದೆ. ತಂತ್ರಜ್ಞಾನ ಸ್ವಾಯತ್ತತೆಯನ್ನು ಸಾಧಿಸಲು ಇದು ಪ್ರಮುಖ ಹಂತವಾಗಿದ್ದು, ಈ ಹಿನ್ನೆಲೆಯಲ್ಲಿ ಪ್ಯಾನ್-ಐಐಟಿ ಬೆಂಗಳೂರು ಸಮಿಟ್ 2026 ರೂಪುಗೊಂಡಿದೆ ಎಂದು ತಿಳಿಸಿದರು.

ಪ್ಯಾನ್ ಐಐಟಿ ಅಧ್ಯಕ್ಷರಾದ ಪ್ರಭಾತ್ ಕುಮಾರ್ (ಐ.ಆರ್.ಎಸ್) ಅವರು ಮಾತನಾಡಿ, ಸಮಿಟ್‌ನಲ್ಲಿ ಉನ್ನತ ಮಟ್ಟದ ಪ್ಲೀನರಿ ಸೆಷನ್‌ಗಳು, ಆಳವಾದ ಪ್ಯಾನೆಲ್ ಚರ್ಚೆಗಳು ಹಾಗೂ ಎಐ, ರಕ್ಷಣಾ, ಸೆಮಿಕಂಡಕ್ಟರ್, ಇಂಧನ, ಮೊಬೈಲಿಟಿ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿ ಸಮಾಂತರ ಚರ್ಚೆಗಳು ನಡೆಯಲಿವೆ ಎಂದು ಹೇಳಿದರು.

ಆಯ್ದ ಪಿಚ್-ಹ್ಯಾಕಥಾನ್ ಮೂಲಕ ಹೆಚ್ಚಿನ ಸಾಧ್ಯತೆ ಹೊಂದಿರುವ ಸ್ಟಾರ್ಟ್‌ಅಪ್‌ಗಳನ್ನು 200ಕ್ಕೂ ಹೆಚ್ಚು ವೆಂಚರ್ ಕ್ಯಾಪಿಟಲಿಸ್ಟ್‌ಗಳೊಂದಿಗೆ ಸಂಪರ್ಕಿಸಲಾಗುವುದು. ಜೊತೆಗೆ, 10,000 ಮಂದಿ ಭಾಗವಹಿಸುವ ಹ್ಯಾಕಥಾನ್‌ನಲ್ಲಿ ಕರ್ನಾಟಕ ಸರ್ಕಾರ ನೀಡಿದ ನೈಜ ಸಮಸ್ಯೆಗಳಿಗೆ ಪರಿಹಾರಗಳನ್ನು ಕಂಡುಹಿಡಿಯಲಾಗುವುದು ಎಂದರು.

ಭಾರತವು ಜಾಗತಿಕ ತಂತ್ರಜ್ಞಾನ ಸ್ಪರ್ಧೆಯಲ್ಲಿ ಮುನ್ನಡೆಯಲು ಆಳವಾದ ವಿಜ್ಞಾನ ಮತ್ತು ಮೂಲ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಹೂಡಿಕೆ ಮಾಡುವ ಅಗತ್ಯವಿದೆ. ಪ್ಯಾನ್ ಐಐಟಿ ಸಮುದಾಯವು ಅಪಾರ ಬೌದ್ಧಿಕ ಸಂಪತ್ತು ಮತ್ತು ಜಾಗತಿಕ ಪ್ರಭಾವ ಹೊಂದಿರುವುದರಿಂದ, ಈ ಸಮಿಟ್ ರಾಷ್ಟ್ರೀಯ ಆದ್ಯತೆಗಳನ್ನು ಜಾಗತಿಕ ಆಶಯಗಳೊಂದಿಗೆ ಹೊಂದಿಸಲು ವೇದಿಕೆಯಾಗಲಿದೆ ಎಂದು ಅವರು ಹೇಳಿದರು.

## ಕಲಬುರ್ಗಿ: ಖರ್ಗೆ ಅಧ್ಯಕ್ಷತೆಯಲ್ಲಿ ಮೇ 1ರಂದು ಬುದ್ಧ ಪೂರ್ಣಿಮಾ: ನಾಟಕ ಪ್ರದರ್ಶನ




**ಕನ್ನಡ ಮಾತೃ ಭೂಮಿ ವಾರ್ತೆ**

**ಕಲಬುರ್ಗಿ,** ನಗರದ ಸಿದ್ಧಾರ್ಥ ವಿಹಾರದಲ್ಲಿ ಇದೇ ಮೇ 1ರಂದು ಬೆಳಿಗ್ಗೆ 10 ಗಂಟೆಗೆ 2570ನೇ ವೈಶಾಖ ಬುದ್ಧ ಪೂರ್ಣಿಮಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ ಎಂದು ಆಡಳಿತಾಧಿಕಾರಿ ಹಾಗೂ ನಿವೃತ್ತ ಸಹಾಯಕ ಆಯುಕ್ತ ರಮೇಶ್ ಕೆ. ಬೇಗಾರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಂತೇಜಿಯವರು ಬುದ್ಧ ವಂದನೆ ಸಲ್ಲಿಸುವರು. ಅತಿಥಿ ಉಪನ್ಯಾಸಕರಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ. ಪುರುಷೋತ್ತಮ ಬಿಳಿಮಲೆ ಅವರು ಆಗಮಿಸುವರು. ಅಧ್ಯಕ್ಷತೆಯನ್ನು ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯಲ್ಲಿನ ವಿರೋಧ ಪಕ್ಷದ ನಾಯಕ ಡಾ. ಮಲ್ಲಿಕಾರ್ಜುನ್ ಖರ್ಗೆಯವರು ವಹಿಸುವರು ಎಂದರು.

ಸಂಜೆ 6 ಗಂಟೆಗೆ ಬುದ್ಧ ವಿಹಾರದ ಬಯಲು ರಂಗಮಂದಿರದಲ್ಲಿ ಸಿದ್ಧಾರ್ಥ ಚಿಮ್ಮಾ ಇದ್ಲಾಯಿ ಹಾಗೂ ಸಂಗಡಿಗರಿಂದ ಬುದ್ಧ-ಭೀಮ ಗೀತಗಾಯನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಮೂಹ ನೃತ್ಯ, ಹೈದ್ರಾಬಾದ್ ಅಭ್ಯುದಯ ಆರ್ಟ್ ಅಕ್ಯಾಡೆಮಿಯ ತೆಲುಗು ಆಧಾರಿತ ಬುದ್ಧನೆಡೆಗೆ ನನ್ನ ಪಯಣ ಅನುವಾದದ ನಾಟಕವು ಪ್ರದರ್ಶನ ಗೊಳ್ಳಲಿದೆ. ಕೊತ್ತೂರು ದೇವೆಂದ್ರರಾವ್ ಅವರು ನಾಟಕ ರಚಿಸಿದ್ದಾರೆ. ಥೂಮು ಶಿವಪ್ರಸಾದ್ ಅವರು ನಾಟಕ ನಿರ್ದೇಶನ ಮಾಡಿದ್ದಾರೆ. ಗಿರಿಮೆಲ್ಲಾ ಗೋಪಾಲಕೃಷ್ಣ ಮತ್ತು ಕಳಗ ಕೃಷ್ಣಮೋಹನ್ ಅವರ ಸಂಗೀತ ನಿರ್ವಹಣೆ ಇದೆ ಎಂದು ಅವರು ಹೇಳಿದರು.

ಸದ್ಯಕ್ಕೆ ಬುದ್ಧ ವಿಹಾರದಲ್ಲಿ ಬೆಂಗಳೂರಿನ ಇಬ್ಬರು ಭಂತೇಜಿಗಳಿದ್ದಾರೆ ಎಂದು ತಿಳಿಸಿದ ಅವರು, ಬುದ್ಧ ವಿಹಾರವನ್ನು ಸಂಜೆ 6 ಗಂಟೆಗೆ ಮುಚ್ಚಲಾಗುತ್ತದೆ. ಬುದ್ಧ ವಿಹಾರಕ್ಕೆ ಕೇವಲ ಜಿಲ್ಲೆಯಿಂದ ಅಷ್ಟೇ ಅಲ್ಲ, ಹೊರ ಜಿಲ್ಲೆ ಹಾಗೂ ಹೊರ ರಾಜ್ಯಗಳಿಂದ ಅನುಯಾಯಿಗಳು ಆಗಮಿಸುವರು. ಹಾಗಾಗಿ ರಾತ್ರಿ 8ರವರೆಗಾದರೂ ಸಮಯದ ಅವಧಿಯನ್ನು ವಿಸ್ತರಿಸಬೇಕು ಎಂಬ ಬೇಡಿಕೆಗೆ ಬುದ್ಧ ವಿಹಾರದ ಮುಖ್ಯಸ್ಥರ ಅನುಮತಿ ಪಡೆಯುವುದಾಗಿ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಜಿಲ್ಲೆಯಲ್ಲಿ ಕಡು ಬೇಸಿಗೆಯ ಬಿಸಿಲು ಇದೆ. ಬೆಳಿಗ್ಗೆ 8ರಿಂದ ಸಂಜೆ 6 ಗಂಟೆಯವರೆಗೂ ಮನೆಯಿಂದ ಹೊರಬರಲಾರದಂತಹ ಪರಿಸ್ಥಿತಿ ಇದೆ. ಇಂತಹ ಸಂದರ್ಭದಲ್ಲಿ ಅಂತಹ ಕಡುಬೇಸಿಗೆಯ ಬಿಸಿಲಿನಲ್ಲಿ ಬುದ್ಧ ವಿಹಾರಕ್ಕೆ ಯಾರೂ ಬರಲು ಆಗದು. ಸಂಜೆ 6 ಗಂಟೆಯ ನಂತರವೇ ಬಿಸಿಲು ತಗ್ಗುತ್ತದೆ. ಆಗಲೇ ಬುದ್ಧ ವಿಹಾರ ಬಂದ್ ಆದರೆ ದರ್ಶನ ಪಡೆಯುವುದು ಸಾಧ್ಯವಿಲ್ಲದೇ ಅನುಯಾಯಿಗಳು ನಿರಾಶರಾಗುತ್ತಾರೆ. ಹಾಗಾಗಿ ಸಮಯದ ಅವಧಿಯನ್ನು ರಾತ್ರಿ ವಿಸ್ತರಿಸಬೇಕು ಎಂಬ ಬೇಡಿಕೆಗೆ ಒಪ್ಪಿ ಕೊಂಡ ಅವರು, ಆಡಳಿತ ಮಂಡಳಿಯ ಪರವಾನಿಗೆಯನ್ನು ಪಡೆಯಲಾಗುವುದು ಎಂದು ಭರವಸೆ ನೀಡಿದರು.

ಶ್ವಾನಕ್ಕೂ ಬೌದ್ಧ ಧರ್ಮದ ನಂಟು:

ಇದೇ ಸಂದರ್ಭದಲ್ಲಿ ಶ್ವಾನವೊಂದು ಹುಮ್ನಾಬಾದ್ ಬಳಿ ಇರುವ ಲಾಲ್‌ಧರಿ ಬುದ್ಧವಿಹಾರದಲ್ಲಿ ಉಳಿದುಕೊಂಡ ವಿಶೇಷತೆಯನ್ನು ರಮೇಶ್ ಬೇಗಾರ್ ಅವರು ಇದೇ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಹಂಚಿಕೊಂಡರು.

ಅಮೇರಿಕಾದಿಂದ ಲಾಲ್‌ಧರಿಗೆ ಆಗಮಿಸಿದ್ದ ಭಂತೇಜಿಗಳು ಪಾದ ಯಾತ್ರೆಯ ಮೂಲಕ ಹೈದ್ರಾಬಾದ್‌ಗೆ ಹೋಗುತ್ತಿದ್ದರು. ಆಗ ರೆಸಾರ್ಟ್‌ನಲ್ಲಿದ್ದ ಶ್ವಾನವೊಂದು ಭಂತೇಜಿ ಅವರ ಪಾದಯಾತ್ರೆಯೊಂದಿಗೆ ಸೇರಿಕೊಂಡಿತು. ಹೈದ್ರಾಬಾದ್‌ವರೆಗೂ ಅವರೊಂದಿಗೆ ತೆರಳಿತು. ನಂತರ ಆ ಭಂತೇಜಿ ಅವರು ಅಮೇರಿಕಕ್ಕೆ ಹೋದಾಗ ಆ ಶ್ವಾನವನ್ನು ಕಾರಿನಲ್ಲಿ ಮರಳಿ ತೆಗೆದುಕೊಂಡು ಬರಲಾಗಿದ್ದು, ಈಗಲೂ ಆ ಶ್ವಾನ ಲಾಲ್‌ಧರಿಯಲ್ಲಿಯೇ ಉಳಿದಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಕಾಡಾ ಮಾಜಿ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಭೀಮರಾವ್ ಟಿ.ಟಿ., ಶಾಂತಪ್ಪ ಸೂರನ್ ಮುಂತಾದವರು ಉಪಸ್ಥಿತರಿದ್ದರು.

## ಇಂದ ಎರಡನೇ ಹಂತದ ದ್ವಿತೀಯ ಪಿಯುಸಿ ಪರೀಕ್ಷೆ: ನಿಷೇಧಾಜ್ಞೆ ಜಾರಿ

**ಕನ್ನಡ ಮಾತೃ ಭೂಮಿ ವಾರ್ತೆ**

**ಕೊಪ್ಪಳ,** ಎರಡನೇ ಹಂತದ ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆಗಳು ಏಪ್ರಿಲ್ 30 ರಿಂದ ಮೇ 13 ರವರೆಗೆ ಕೊಪ್ಪಳ ಜಿಲ್ಲೆಯ ವಿವವಿಧ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆ-2ರ ಪರೀಕ್ಷೆಗಳು ಏಪ್ರಿಲ್ 30 ರಿಂದ ಮೇ 13 ರವರೆಗೆ ಬೆಳಿಗ್ಗೆ 10 ಗಂಟೆ ಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಜಿಲ್ಲೆಯ ಕೊಪ್ಪಳದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು, ಗಂಗಾವತಿಯ ಬಾಲಕರ ಸರಕಾರಿ ಪದವಿ ಪೂರ್ವ ಕಾಲೇಜು, ಕುಷ್ಟಗಿಯ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜು, ಯಲಬುರ್ಗಾದ ಸರಕಾರಿ ಪದವಿ ಪೂರ್ವ ಕಾಲೇಜು ಮತ್ತು ಕಾರಟಗಿಯ ಸರಕಾರಿ ಪದವಿ ಪೂರ್ವ ಕಾಲೇಜು,

ಈ ಐದು ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಪರೀಕ್ಷೆಗಳನ್ನು ಸುಗಮ ಮತ್ತು ಶಾಂತಿಯುತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ಅಂತರದ ಪ್ರದೇಶದಲ್ಲಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163 ರನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ನಿಷೇಧಾಜ್ಞೆ ಜಾರಿಯನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ. ಮೊಬೈಲ್, ಪೇರ್ಜ, ಜರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಹಾಗೂ ನಿಯೋಜಿತ ಶಿಕ್ಷಕರನ್ನು ಜಾಗೃತ ದಳದವರನ್ನು ಹೊರತುಪಡಿಸಿ ಇನ್ನುಳಿದವರಿಗೆ ಪರವಾನಿಗೆ ಇಲ್ಲದೆ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವುದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವುದಿಲ್ಲ ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

## ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ತಡೆದ ಕಾಂಗ್ರೆಸ್ ಮಿತ್ರಪಕ್ಷಗಳ ವಿರುದ್ಧ ಮಹಿಳೆಯರ ಆಕ್ರೋಶ

**ಕನ್ನಡ ಮಾತೃ ಭೂಮಿ ವಾರ್ತೆ**

**ಬಳ್ಳಾರಿ,** ನಾರಿ ಶಕ್ತಿ ಫೋರಂ ನಿಂದ. ನಾರಿ ಶಕ್ತಿ ವಂದನಾ ಅಧಿನಿಯಮ (ಮಹಿಳಾ ಮೀಸಲಾತಿ ಮಸೂದೆ) ಜಾರಿಯಾಗ ದಂತೆ ತಡೆದ ಕಾಂಗ್ರೆಸ್ ಮತ್ತು ಮಿತ್ರಪಕ್ಷಗಳ ವಿರುದ್ಧ ಮಹಿಳೆಯರು ನಿನ್ನೆ ಸಂಜೆ ನಗರದಲ್ಲಿ ಜನಾಕ್ರೋಶ ಜಾಥಾ ನಡೆಸಿದರು.




ಶೇ 33 ರಷ್ಟು ಮಹಿಳಾ ಮೀಸಲಾತಿ ಬೇಕೆ, ಬೇಕು, ನಾರಿ ಶಕ್ತಿ ದೇಶದ ಶಕ್ತಿ ಸೇರಿದಂತೆ ಹಲವು ಘೋಷಣೆಗಳ ಫಲಕ ಹಿಡಿದ ಮಹುಳೆಯರು, ಅದರಲ್ಲೂ ಅಲ್ಪ ಸಂಖ್ಯಾತರು, ತೃತೀಯ ಲಿಂಗಿಗಳು, ಸಮಾಜದ ವಿವಿಧ ಕ್ಷೇತ್ರಗಳಲ್ಲಿನ ಮಹಿಳೆಯರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನಗರದ ದುರ್ಗಮ್ಮ ದೇವಸ್ಥಾನದಿಂದ ಆರಂಭಗೊಂಡ ಜಾಥಾ ಗಡಗಿ ಚೆನ್ನಪ್ಪ ಸರ್ಕಲ್ ಗೆ ಆಗಮಿಸಿ ಮಾನವ ಸರಪಳಿ ನಿರ್ಮಿಸಿ ನಾರಿಯರು ತಮ್ಮ ಶಕ್ತಿ ಪ್ರದರ್ಶನ ಮಾಡಿದರು.

ಈ ವೇಳೆ ಮಾತನಾಡಿದ ವೈದ್ಯೆ ಡಾ.ಅರುಣಾ ಕಾಮಿನೇನಿ. ಪ್ರಧಾನಿ ನರೇಂದ್ರ ಮೋದಿ ಅವರು ಇ8 ದೇಶದ ಮಹಿಳೆಯರಿಗೆ ರಾಜಕೀಯವಾಗಿ ಹೆಚ್ಚಿನ ಶಕ್ತಿ ತರಲು ನಡೆಸುದ ಪ್ರಯತ್ನಕ್ಕೆ ವಿರೋಧ ಪಕ್ಷಗಳು ವಿರೋದ ಮಾಡಿರುವುದನ್ನು ನಾವು ಖಂಡಿಸುತ್ತೇವೆ ಎಂದರು.

ಮತ್ತೋರ್ವ ವೈದ್ಯೆ ಡಾ. ರೇಣುಕಾ ಮಂಜುನಾಥ ಮಾತನಾಡಿ, ದೇಶದ ರಾಷ್ಟ್ರಪತಿ, ಹಣಕಾಸು ಸಚಿವೆ, ಅಷ್ಟೇ ಏಕೆ ಆಪರೇಷನ್ ಸಿಂದೂರವನ್ನು ಮುನ್ನಡೆಸಿದವರು ಮಹಿಳಾ ಶಕ್ತಿಯೇ ಹೀಗಿರುವಾಗ ಪ್ರತಿಪಕ್ಷಗಳು ನಾರಿ ಶಕ್ತಿ ರಾಜಕೀಯವಾಗಿ ಮೀಸಲಾತಿ ಪಡೆಯುವುದನ್ನು ವಿರೋಧಿಸುವುದು ಸರಿಯಲ್ಲ ನಮ್‌ಎಂಮ ಹೋರಾಟ ನಿರಂತರ ಎಂದರು.

ಮಾಜಿ ಸೈನಿಕರಾದ ಕರ್ನಲ್ ಶಶಿಕಲಾ ಅವರು ಮಾತನಾಡಿ, ಮಹಿಳಾ ಮೀಸಲಾತಿಯನ್ನು ಮಹಿಳೆಯರ ಹಕ್ಕಾಗಿ ನೀಡಿ, ಈಗಾಗಲೇ ಸಂಸತ್ ನಲ್ಲಿ ಮಸೂದೆ ಅನುಮೋದನೆಗೊಂಡಿದೆ ಅದನ್ನು ಕ್ಷೇತ್ರ ಮರುವಿಂಗಡಣೆ ಮೂಲಕ ಜಾರಿಗೆ ತನ್ನಿ ಎಂದರು.

ಪ್ರತಿಭಟನೆಯಲ್ಲಿ ಬಿಜೆಪಿ ಮಹಿಳಾ ಮೋರ್ಚಾ ಘಟಕ ಜಿಲ್ಲಾದ್ಯಕ್ಷೆ ಹಂಪಿ ರಮಣ, ರಾಜ್ಯ ಉಪಾದ್ಯಕ್ಷೆ ಕೆ.ಆರ್. ವಿಜಯಲಕ್ಷ್ಮಿ, ಪಾಲಿಕೆ ಸದಸ್ಯೆ ಸುರೇಖಾ ಮಲ್ಲನಗೌಡ, ಚೇತನಾ ಮೇಮಣ್ಣ ಮುಖಂಡರಾದ ಸಾಧನಾ ಹಿರೇಮಠ್, ಮೊದಲಾದವರು ಪಾಲ್ಗೊಂಡಿದ್ದರು.

## ಕುವೆಂಪು ವಿಶ್ವವಿದ್ಯಾನಿಲಯದಿಂದ ಐಜಿಪಿ ಹರ್ಷ ಪಿ.ಎಸ್ ಅವರಿಗೆ ಪಿಎಚ್‌ಡಿ ಪದವಿ ಘೋಷಣೆ

**ಕನ್ನಡ ಮಾತೃ ಭೂಮಿ ವಾರ್ತೆ**

**ಬಳ್ಳಾರಿ,** ಕುವೆಂಪು ವಿಶ್ವವಿದ್ಯಾನಿಲಯವು ಬಳ್ಳಾರಿ ವಲಯ ಪೊಲೀಸ್ ಉಪಮಹಾನಿರೀಕ್ಷಕರು ಹರ್ಷ ಪಿ.ಎಸ್ ಅವರಿಗೆ ವನ್ಯಜೀವಿ ಮತ್ತು ನಿರ್ವಹಣಾ ವಿಭಾಗದಲ್ಲಿನ ಸಂಶೋಧ ನೆಗಾಗಿ ಡಾಕ್ಟರ್ ಆಫ್ ಫಿಲಾಸಫಿ (ಪಿಎಚ್‌ಡಿ) ಪದವಿ ಯನ್ನು ಘೋಷಿ ಸಿದ್ದು, ಮೇ. 06 ರಂದು ಪಿ.ಹೆಚ್.ಡಿ. ಪ್ರದಾನ ಮಾಡಲಿದೆ.



ಕುವೆಂಪು ವಿಶ್ವವಿದ್ಯಾನಿಲಯದ ವನ್ಯಜೀವಿ ಮತ್ತು ನಿರ್ವಹಣಾ ವಿಭಾಗದ ಪ್ರಾಧ್ಯಾಪಕ ಡಾ. ವಿಜಯ ಕುಮಾರ್ ಅವರ ಮಾರ್ಗದರ್ಶನದಲ್ಲಿ ಹರ್ಷ ಪಿ.ಎಸ್ ಅವರು ಐದು ವರ್ಷಗಳ ಕಾಲ ಕ್ಷೇತ್ರ ಆಧಾರಿತ ಅಧ್ಯಯನವನ್ನು ನಡೆಸಿದ್ದಾರೆ.

ನಾಗರಹೊಳೆ, ಬಂಡೀಪುರ ಮತ್ತು ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ಹುಲಿಗಳ ಜನಸಂಖ್ಯೆಯ ಸ್ಥಿರತೆಯ ಕುರಿತು ಒಂದು ಅಧ್ಯಯನ, ಮಾನವ-ಹುಲಿ ಸಂಘರ್ಷಕ್ಕೆ ವಿಶೇಷ ಉಲ್ಲೇಖದೊಂದಿಗೆ ಎಂಬ ಶೀರ್ಷಿಕೆಯ ಅವರ ಡಾಕ್ಟರೇಟ್ ಪ್ರಬಂಧವು ಈ ಸಂರಕ್ಷಿತ ಪ್ರದೇಶಗಳಲ್ಲಿ ದೊಡ್ಡ ಪ್ರಮಾಣದ ಕ್ಯಾಮೆರಾ ಟ್ರ್ಯಾಪಿಂಗ್ ಮತ್ತು ವಿವರವಾದ ಸಂಘರ್ಷ ತಾಣಗಳ ವಿಶ್ಲೇಷಣೆ ಸೇರಿದಂತೆ ತೀವ್ರವಾದ ಕ್ಷೇತ್ರಕಾರ್ಯವನ್ನು ಆಧರಿಸಿದೆ.

ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಔಪಚಾರಿಕವಾಗಿ ಅನುಮೋದಿಸಿ ಪದವಿ ನೀಡಿದೆ.

ಮೇ 6, 2026 ರಂದು ನಡೆಯಲಿರುವ ಕುವೆಂಪು ವಿಶ್ವವಿದ್ಯಾನಿಲಯದ ಘಟಿಕೋತ್ಸವ ಸಮಾರಂಭದಲ್ಲಿ ಪಿಎಚ್‌ಡಿ ಪ್ರಮಾಣಪತ್ರ ನೀಡಲಾಗುವುದು.

# ಕಲಬುರ್ಗಿಯಲ್ಲಿ ನಾಳೆ ವಿಶ್ವಕಾರ್ಮಿಕರ ದಿನಾಚರಣೆ ಬೃಹತ್ ರ್‍ಯಾಲಿ



**ಕನ್ನಡ ಮಾತೃ ಭೂಮಿ ವಾರ್ತೆ**

**ಕಲಬುರ್ಗಿ,** ನಗರದ ಕನ್ನಡ ಭವನದಲ್ಲಿ ವಿಶ್ವಕಾರ್ಮಿಕರ ದಿನಾಚರಣೆ ನಿಮಿತ್ಯ ಮೇ 1ರಂದು ಕಾರ್ಯಕ್ರಮ ಆಯೋಜಿಸಲಾಗಿದೆ. ಅಲ್ಲದೇ ಬೃಹತ್ ಮೆರವಣಿಗೆಯನ್ನೂ ಸಹ ಹಮ್ಮಿಕೊಳ್ಳಲಾಗಿದೆ. ಜೊತೆಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುವುದು ಎಂದು ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ರಾಜ್ಯ ಉಪಾಧ್ಯಕ್ಷ ಶಂಕರ ಕಟ್ಟಿಸಂಗಾವಿ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10-30ಕ್ಕೆ ಬೃಹತ್ ಮೆರವಣಿಗೆ ಜರುಗಲಿದೆ. ನಂತರ ಕನ್ನಡ ಭವನದಲ್ಲಿ ಕಾರ್ಯಕ್ರಮ ಉದ್ಘಾಟನೆಯಾಗಲಿದೆ. ಆ ಸಮಾರಂಭದಲ್ಲಿ ಎಸ್ಎಸ್ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ಕಾರ್ಮಿಕರ ಮಕ್ಕಳಿಗೆ ಸನ್ಮಾನಿಸಿ ಗೌರವಿಸಲಾಗುವುದು ಎಂದರು.

ಸಾವಿರಾರು ವರ್ಷಗಳಿಂದ ಕಾರ್ಮಿಕರ ಚಳುವಳಿ ದಬ್ಬಾಳಿಕೆ, ಶೋಷಣೆ, ಆಡಳಿತಶಾಹಿ ವಿರುದ್ಧ ನಡೆಯುತ್ತ ಬಂದಿದೆ. ಬ್ರಿಟಿಷ್ ಆಡಳಿತ ಶಾಹಿ ಗೋಲಿಬಾರ್‌ನಿಂದಾಗಿ ನೂರಾರು ಕಾರ್ಮಿಕರ ಹತ್ಯೆಯಾಯಿತು. ದೇಶವ್ಯಾಪಿ ಕಾರ್ಮಿಕರ ಹಕ್ಕಿನ ಹೋರಾಟಕ್ಕೆ ಅಂದಿನ ಆಡಳಿತ ಶಾಹಿ ಸರ್ಕಾರ ಮಣಿದು 18 ಗಂಟೆಗಳ ಕೆಲಸದ ಬದಲಾಗಿ 8 ಗಂಟೆ ಕೆಲಸ, 8 ಗಂಟೆ ವಿಶ್ರಾಂತಿ, 8 ಗಂಟೆ ಮನೋರಂಜನೆ ಎಂಬ ಕಾಯ್ದೆ ಜಾರಿಗೆ ತಂದಿತು ಎಂದು ಅವರು ಹೇಳಿದರು.

12ನೇ ಶತಮಾನದಲ್ಲಿ ಬಸವಾದಿ ಶರಣರು ಕಾಯಕ ಜೀವಿಗಳಿಗೆ ಶ್ರೇಷ್ಠತೆ, ಸಮಾನತೆ ನೀಡಿದರು. ನಂತರ ಕಾರ್ಲ್ ಮಾರ್ಕ್ಸ್, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನ ಬದ್ಧವಾದ ಹಕ್ಕು, ದುಡಿಯುವ ವರ್ಗದ ಶ್ರಮಜೀವಿಗಳಿಗೆ ಬದುಕಿನ ಚಲಾವಣೆಗಾಗಿ ಕಾಯ್ದೆಗಳನ್ನು ಜಾರಿಗೆ ತಂದರು. ಈಗ ಶ್ರಮಜೀವಿಗಳ ಶಕ್ತಿಯನ್ನು ಕುಗ್ಗಿಸಲು ಜಾತಿ, ಧರ್ಮ, ಭಾಷೆಗಳ ಆಧಾರದಲ್ಲಿ ಕಾರ್ಮಿಕರ ಸಂಘಟಗಳನ್ನು ಕಟ್ಟಿಕೊಳ್ಳುವುದು ವಿಶ್ವದ ಕಾರ್ಮಿಕರ ಐಕ್ಯತೆಗೆ ಧಕ್ಕೆಯಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಕೇಂದ್ರದಲ್ಲಿನ ಎನ್‌ಡಿಎ ಸರ್ಕಾರವು ಕಾರ್ಮಿಕರ ಕಾಯ್ದೆಗಳನ್ನು ರದ್ದುಪಡಿಸಿ ಲೇಬರ್ ಕೋಡ್‌ಗಳ ಹೆಸರಿನಲ್ಲಿ ಕಾರ್ಮಿಕರ ಹಕ್ಕುಗಳನ್ನು ದಮನಗೊಳಿಸುವ ನೀತಿಯನ್ನು ಜಾರಿಗೆ ತಂದಿದೆ. ಇದರಿಂದ ಕಾರ್ಮಿಕರು ಬೀದಿ ಪಾಲಾಗುತ್ತಿದ್ದಾರೆ. ಹೀಗಾಗಿ ಮೊದಲಿನ ಕಾರ್ಮಿಕ ಕಾನೂನುಗಳನ್ನು ಮರು ಸ್ಥಾಪಿಸಬೇಕು ಎಂದು ಅವರು ಒತ್ತಾಯಿಸಿದರು.

ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಹಕ್ಕುಗಳ ರಕ್ಷಣೆಗಾಗಿ ಕಾರ್ಮಿಕರ ಕಾಯ್ದೆ ಸಂವಿಧಾನ ಉಳಿವಿಗಾಗಿ ದುಡಿಯುವ ವರ್ಗದ ಕಾರ್ಮಿಕರನ್ನು ಒಂದುಗೂಡಿಸಿ ಐಕ್ಯತೆಯ ಚಳುವಳಿಯನ್ನು ಕಟ್ಟುವ ಉದ್ದೇಶದಿಂದ ಜಿಲ್ಲೆಯ ಪ್ರಮುಖ ರಾಷ್ಟ್ರೀಯ ಕಾರ್ಮಿಕ ಸಂಘಟನೆಗಳು ಒಗ್ಗೂಡಿ ಈ ಬಾರಿ ವಿಶ್ವ ಕಾರ್ಮಿಕರ ದಿನಾಚರಣೆ ಹಮ್ಮಿಕೊಂಡಿದೆ ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪ್ರಭುದೇವ್ ಯಳಸಂಗಿ, ಅಶೋಕ್ ಗೂಳಿ, ಎಸ್.ಎಂ. ಶರ್ಮಾ, ಮಲ್ಲಿಕಾರ್ಜುನ್ ಮಾಳಗೆ, ಮೋಸಿನ್ ಪಟೇಲ್, ಸಿದ್ದಪ್ಪ ಪಾಲ್ಕಿ, ರಾಜು ದೊರೆ, ಅಲ್ಲಾವುದ್ದೀನ್ ಗುತ್ತೇದಾರ್, ಹೊನ್ನಪ್ಪ ಬಿ. ಸುಂಬುಡ, ಶಿವಲಿಂಗ ಹಾವನೂರ್, ಬಂದೇನವಾಜ್, ಆಯೂಬಖಾನ್, ಚಂದು ಜಾಧವ್, ಸುನೀಲ್ ಮಾನ್ಪಡೆ ಮುಂತಾದವರು ಉಪಸ್ಥಿತರಿದ್ದರು.

# ಎಐಸಿಸಿ ಅಧ್ಯಕ್ಷ ಖರ್ಗೆ ರಾಜಕೀಯ ನಿವೃತ್ತಿಗೆ ಬಿಜೆಪಿ ನಾಯಕರ ಒತ್ತಡಕ್ಕೆ ಕಾಂಗ್ರೆಸ್ ಖಂಡನೆ

**ಕನ್ನಡ ಮಾತೃ ಭೂಮಿ ವಾರ್ತೆ**



**ಕಲಬುರ್ಗಿ,** ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆಯವರು ರಾಜಕೀಯ ನಿವೃತ್ತಿ ಹೊಂದ ಬೇಕು ಎಂದು ಹೇಳಿಕೆ ನೀಡುತ್ತಿರುವ ಬಿಜೆಪಿ ಮುಖಂಡರಾದ ಆರ್. ಅಶೋಕ್ ಹಾಗೂ ಚಲವಾದಿ ನಾರಾಯಣಸ್ವಾಮಿ ಮತ್ತು ಜಿಲ್ಲೆಯ ಕೆಲವು ಬಿಜೆಪಿ ನಾಯಕರ ಇಂತಹ ಅಸಮಂಜಸ ಹೇಳಿಕೆಯನ್ನು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಕಾಳಗಿ ಅವರು ಖಂಡಿಸಿದ್ದಾರೆ.

ಖರ್ಗೆಯವರು ಕರ್ನಾಟಕ ರಾಜ್ಯ ಹಾಗೂ ರಾಷ್ಟ್ರ ಕಂಡಂತಹ ಒಬ್ಬ ಹಿರಿಯ ಹಾಗೂ ಅನುಭವಿಯ ಅಪರೂಪದ ರಾಜಕಾರಣಿ. ಇಂತಹ ಹಿರಿಯ ಅನುಭವಿ ರಾಜಕಾರಣಿಯ ಕುರಿತು ಮಾತನಾಡುವಾಗ ಬಿಜೆಪಿ ಮುಖಂಡರು ಮೊದಲು ಸರಿಯಾಗಿ ತಿಳಿದುಕೊಂಡು ಅರಿತು ಮಾತನಾಡಲಿ. ಚುನಾವಣೆಯಲ್ಲಿ ಮತದಾರರ ಕೃಪಾಶೀರ್ವಾದದಿಂದ ಸುಮಾರು 11 ಬಾರಿ ಜಯಶಾಲಿಯಾಗಿ ವಿಧಾನಸಭೆ, ಲೋಕಸಭೆಗೆ ಆಯ್ಕೆಗೊಂಡಿದ್ದು, ಕರ್ನಾಟಕ ರಾಜ್ಯಕ್ಕೆ ಮೇಲಾಗಿ ಕಲ್ಯಾಣ ಕರ್ನಾಟಕಕ್ಕೆ 371 (ಜೆ) ಕಲಂ ಜಾರಿಗೆ ತಂದು ರಾಜಕೀಯವಾಗಿ, ಸರ್ಕಾರಿ ಉದ್ಯೋಗದಲ್ಲಿ, ಸೇವಾ ಮುಂಬಡ್ತಿಯಲ್ಲಿ, ಶಿಕ್ಷಣದಲ್ಲಿ, ಮೂಲಭೂತ ಅಭಿವೃದ್ಧಿಯಲ್ಲಿ, ಕಾಮಗಾರಿಗಳ ವಿಶೇಷ ಅನುದಾನದಲ್ಲಿ ಹಾಗೂ ಇನ್ನಿತರವಾಗಿ ಈ ಹಿಂದುಳಿದ ಭಾಗಕ್ಕೆ ನ್ಯಾಯ ದೊರಕಿಸಿಕೊಟ್ಟಿದ್ದಾರೆ ಎಂದು ಅವರು ಖರ್ಗೆಯವರ ಸಾಧನೆಗಳನ್ನು ಕೊಂಡಾಡಿದ್ದಾರೆ.

ಎಲ್ಲ ಸದುಪಯೋಗಗಳನ್ನು ಪಡೆದುಕೊಂಡು ರಾಜಕೀಯವಾಗಿ ಇವರು ನಿವೃತ್ತಿ ನಿಡಬೇಕು ಎಂದು ಹೇಳುವದು ಯಾವ ನ್ಯಾಯ. ಈ ಭಾಗದ ಮತದಾರ ಪ್ರಭುಗಳು ಅವರನ್ನು ಕೈ ಬಿಡದೇ ಸತತವಾಗಿ ಚುನಾವಣೆಯಲ್ಲಿ ಗೆಲ್ಲಿಸುತ್ತಾ ಬಂದಿದ್ದಾರೆ. ಇದನ್ನು ಸಹಿಸದೇ ಖರ್ಗೆಜೀಯವರ ಮುಂದೆ ಜನಿಸಿ ಬೆಳೆದ ಬಿಜೆಪಿಯ ಕೆಲವು ಮುಖಂಡರು ಖರ್ಗೆಯವರ ಕುರಿತು ಹಗುರವಾಗಿ ಮಾತನಾಡುವದು ಸರಿಯಲ್ಲ. ಇಂತಹ ಹಿರಿಯ ಅನುಭವಿ ರಾಜಕಾರಣಿಯು ಇನ್ನೂ ಹೆಚ್ಚು ವರ್ಷಗಳ ಕಾಲ ಅಧಿಕಾರದಲ್ಲಿದ್ದು ರಾಷ್ಟ್ರ ಹಾಗೂ ಕರ್ನಾಟಕ ರಾಜ್ಯದ ಜನರ ಆಗುಹೋಗುಗಳಿಗೆ ಮತ್ತು ಈ ಭಾಗದ ಅಭಿವೃದ್ಧಿಗೆ ಸೇವೆ ಸಲ್ಲಿಸಲಿ ಎಂದು ಹೇಳಿದ ಅವರು, ಬಿಜೆಪಿ ಯವರ ಇಂತಹ ಕೀಳು ಮಟ್ಟದ ಹೇಳಿಕೆಯನ್ನು ಖಂಡಿಸುವುದಾಗಿ ತಿಳಿಸಿದ್ದಾರೆ.

# ಬದ್ಧತೆಯಿಂದ ಕಾರ್ಯನಿರ್ವಹಿಸಿರಿ: ಅಧಿಕಾರಿಗಳಿಗೆ ಡಾ. ಅಜಯ್‌ಸಿಂಗ್ ಸೂಚನೆ




**ಕನ್ನಡ ಮಾತೃ ಭೂಮಿ ವಾರ್ತೆ**

**ಜೇವರ್ಗಿ,** ನಗರದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಭಾಂಗಣದಲ್ಲಿ ಸೋಮವಾರ ಮಂಡಳಿಯ ಅಧ್ಯಕ್ಷ ಹಾಗೂ ಜೇವರ್ಗಿ ಕ್ಷೇತ್ರದ ಶಾಸಕ ಡಾ. ಅಜಯಸಿಂಗ್ ಅವರು ಯಡ್ರಾಮಿ ಮತ್ತು ಜೇವರ್ಗಿ ತಾಲ್ಲೂಕಿನ ತಹಸಿಲ್ದಾರರೊಂದಿಗೆ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಮಹತ್ವದ ಸಭೆ ಮಾಡಿದರು.

ಬೇಸಿಗೆಯ ಬಿಸಿಲಿನ ಬೇಗೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ನಮ್ಮ ಎರಡೂ ತಾಲ್ಲೂಕುಗಳ ಪಟ್ಟಣ ಹಾಗೂ ಹಳ್ಳಿಗಳಲ್ಲಿ ಜನರಿಗೆ ಕುಡಿಯುವ ನೀರಿನ ಕೊರತೆಯಾಗದಂತೆ ಎಚ್ಚರವಹಿಸಲು ಚರ್ಚಿಸಿದರು.

ಈ ನಿಟ್ಟಿನಲ್ಲಿ, ತುರ್ತು ಅಗತ್ಯಗಳನ್ನು ಪೂರೈಸಲು ಮತ್ತು ನಿರಂತರ ಮೇಲ್ವಿಚಾರಣೆ ನಡೆಸಲು ವಿಶೇಷ ಕಾರ್ಯಪಡೆಯನ್ನು ರಚಿಸಲಾಯಿತು. ನಮ್ಮ ಎರಡೂ ತಾಲೂಕುಗಳ ಜನತೆಗೆ ನೀರಿನ ಸಮಸ್ಯೆ ಉಂಟಾಗದಂತೆ ಆಡಳಿತ ವರ್ಗವು ಸಂಪೂರ್ಣ ಬದ್ಧತೆಯಿಂದ ಕಾರ್ಯನಿರ್ವಹಿಸುವಂತೆ ಈ ಸಂದರ್ಭದಲ್ಲಿ ಡಾ. ಅಜಯ್‌ಸಿಂಗ್ ಅವರು ಖಡಕ್ ಸೂಚನೆ ನೀಡಿದರು.

# ಶಶಿಧರ ಹೊಸಳ್ಳಿಯನ್ನು ಬಿಜೆಪಿ ಪಕ್ಷದಿಂದ ಉಚ್ಚಾಟಿಸಬೇಕು: ಬಸವರಾಜ ಜಾಬಶೆಟ್ಟಿ ಆಗ್ರಹ

**ಕನ್ನಡ ಮಾತೃ ಭೂಮಿ ವಾರ್ತೆ**



**ಬೀದರ್,** ಮಹಾನಗರ ಪಾಲಿಕೆ ಸದಸ್ಯರು ಹಾಗೂ ಬಿಜೆಪಿ ನಗರ ಘಟಕದ ಅಧ್ಯಕ್ಷ ಶಶಿಧರ ಹೊಸಳ್ಳಿ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟಿಸಬೇಕು ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಜಾಬಶೆಟ್ಟಿ ಆಗ್ರಹಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷರು ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಡಾ. ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಶಶಿಧರ ಹೊಸಳ್ಳಿ ಅವಹೇಳನಕಾರಿ ಮಾತುಗಳನ್ನಾಡಿ ರುವುದು ಅಕ್ಷಮ್ಯ ಅಪರಾಧ ಎಂದು ಖಂಡಿಸಿದರು.

ಈ ಭಾಗಕ್ಕೆ 371(ಜೆ) ವಿಧಿ ಜಾರಿಗೆ ತರಲು ಮಹತ್ವದ ಪಾತ್ರ ವಹಿಸಿದವರು, ಬೀದರ್-ಯಶವಂತಪುರ ರೈಲು ಆರಂಭಿಸಲು ಶ್ರಮಿಸಿದವರು ಡಾ. ಖರ್ಗೆ. ಅಂತಹ ಹಿರಿಯ ನಾಯಕರ ಬಗ್ಗೆ ಮಾತನಾಡುವಾಗ ಗೌರವ ಇರಬೇಕು. ಶಶಿಧರ ಹೊಸಳ್ಳಿ ಅವರಂತಹವರಿಗೆ ಬಿಜೆಪಿ ಹಿರಿಯರು ಬುದ್ಧಿವಾದ ಹೇಳಬೇಕು. ಇಂತಹ ಹೇಳಿಕೆಗಳನ್ನು ಪುನರಾವರ್ತಿಸದಂತೆ ಎಚ್ಚರಿಕೆ ನೀಡಬೇಕು ಎಂದು ಒತ್ತಾಯಿಸಿದರು.

ಈ ಹಿಂದೆ ಸಹ ರಾಜ್ಯದ ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರ ವಿರುದ್ಧವೂ ಹೊಸಳ್ಳಿ ಅವಹೇಳನಕಾರಿ ಹೇಳಿಕೆ ನೀಡಿದ್ದರು. ಮೊದಲು ಬಾಯಿಗೆ ಬಂದಂತೆ ಮಾತನಾಡಿ, ನಂತರ ವಿಷಾದ ವ್ಯಕ್ತಪಡಿಸುವುದು ಶೋಭೆ ತರುವುದಿಲ್ಲ. ಅವರ ಈ ನಡೆಯನ್ನು ಜಿಲ್ಲಾ ಕಾಂಗ್ರೆಸ್ ಪಕ್ಷ ಉಗ್ರವಾಗಿ ಖಂಡಿಸುತ್ತದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಹಾನಗರ ಪಾಲಿಕೆ ಅಧ್ಯಕ್ಷ ಮಹಮ್ಮದ್ ಗೌಸುದ್ದಿನ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸಂಜಯ ಜಾಗಿರದಾರ, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಮಾಜಿ ಮುಖಂಡ ಮನ್ನಾನ್ ಸೇಠ್, ಎಸ್.ಸಿ ಮೋರ್ಚಾ ಅಧ್ಯಕ್ಷ ಸಂಜು ಡಿ.ಕೆ, ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ಎಂ.ಎ. ಸಮಿ, ದತ್ತಾತ್ರಿ ಮೂಲಗೆ, ವಿನೋದ ಅಪ್ಪೆ, ಜಾರ್ಜ್ ಫರ್ನಾಂಡಿಸ್ ಉಪಸ್ಥಿತರಿದ್ದರು.

**ಉಪರಾಷ್ಟ್ರಪತಿ ಬಗ್ಗೆ ಅರಳಿ ಟೀಕೆ**

ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ ಮಾತನಾಡಿ, ಉಪರಾಷ್ಟ್ರಪತಿ ರಾಧಾಕೃಷ್ಣನ್ ಅವರು ಖರ್ಗೆ ಅವರ ಕುರಿತು ಮಾತನಾಡುವ ಮೂಲಕ ಬಿಜೆಪಿ ಪರವಾಗಿದ್ದಂತೆ ತೋರಿಸಿಕೊಂಡಿದ್ದಾರೆ ಎಂದು ಟೀಕಿಸಿದರು.

ಭಾಲ್ಕಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ. ಮಲ್ಲಿಕಾರ್ಜುನ ಖರ್ಗೆ ಕುರಿತು ಮಾತನಾಡಿರುವುದು ದೇಶದ ಸಂವಿಧಾನಿಕ ಹುದ್ದೆಯ ಗೌರವಕ್ಕೆ ತಕ್ಕದ್ದಲ್ಲ. ರಾಷ್ಟ್ರಪತಿ, ಉಪರಾಷ್ಟ್ರಪತಿ ಹಾಗೂ ರಾಜ್ಯಪಾಲರು ಯಾವುದೇ ಪಕ್ಷದ ಪರವಾಗಿ ಮಾತನಾಡಬಾರದು ಎಂದು ಹೇಳಿದರು.

ಶಶಿಧರ ಹೊಸಳ್ಳಿ ವಿರುದ್ಧ ರಾಜ್ಯ ಸರ್ಕಾರ ಸುಮೋಟೋ ಪ್ರಕರಣ ದಾಖಲಿಸಬೇಕು. ಇಲ್ಲದಿದ್ದರೆ ಕಾಂಗ್ರೆಸ್ ಕಾರ್ಯಕರ್ತರು ಠಾಣೆಯಲ್ಲಿ ದೂರು ದಾಖಲಿಸಲಿದ್ದಾರೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯ ಕೆ. ಪುಂಡಲಿಕರಾವ, ಮಹಾನಗರ ಪಾಲಿಕೆ ಅಧ್ಯಕ್ಷ ಮಹಮ್ಮದ್ ಗೌಸುದ್ದಿನ್, ಸಂಜಯ ಜಾಗಿರದಾರ, ಮನ್ನಾನ್ ಸೇಠ್, ಅಮೃತರಾವ ಚಿಮಕೊಡೆ, ಪ್ರಶಾಂತ ದೊಡ್ಡಿ, ದತ್ತಾತ್ರಿ ಮೂಲಗೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬಳಸಿದ ಪದಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದ ಶಶಿಧರ ಹೊಸಳ್ಳಿ

**ಕನ್ನಡ ಮಾತೃ ಭೂಮಿ ವಾರ್ತೆ**



**ಬೀದರ್,** ಕೆಲವು ದಿನಗಳ ಹಿಂದೆ ದೇಶದ ಪ್ರಧಾನಿ ನರೇಂದ್ರ ಮೋದಿ ಅವರ ಕುರಿತು ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಬಳಸಿದ ಪದಗಳ ಹಿನ್ನೆಲೆ ಬಿಜೆಪಿ ಯುವ ಮೋರ್ಚಾ ವತಿಯಿಂದ ಬೀದರ್ ನಗರದಲ್ಲಿ ಪ್ರತಿಭಟನೆ ನಡೆದ ವೇಳೆ ತಾವು ಆವೇಶಭರಿತವಾಗಿ ಕೆಲವು ಪದಗಳನ್ನು ಬಳಸಿರುವುದು ವಿಷಾದಕರ ಸಂಗತಿ ಎಂದು ಬಿಜೆಪಿ ನಗರ ಮಂಡಲ ಅಧ್ಯಕ್ಷರು ಹಾಗೂ ಮಹಾನಗರ ಪಾಲಿಕೆ ಸದಸ್ಯರಾದ ಶಶಿಧರ ಹೊಸಳ್ಳಿ ತಿಳಿಸಿದ್ದಾರೆ.


ಈ ಕುರಿತು ಪ್ರಕಟಣೆ ನೀಡಿರುವ ಅವರು, ಪ್ರತಿಭಟನೆಯ ಮುಂಚೂಣಿಯಲ್ಲಿ ಇದ್ದ ಸಂದರ್ಭದಲ್ಲಿ ಭಾವೋದ್ವೇಗದಿಂದ ಕೆಲವೊಂದು ಪದಗಳು ಬಳಕೆಯಾಗಿವೆ. ಅದರಿಂದ ಯಾರಿಗಾದರೂ ಮನಸ್ತಾಪವಾಗಿದ್ದರೆ ವಿಷಾದ ವ್ಯಕ್ತಪಡಿಸುತ್ತೇನೆ ಎಂದು ಹೇಳಿದ್ದಾರೆ.

ಡಾ. ಮಲ್ಲಿಕಾರ್ಜುನ ಖರ್ಗೆ ಅವರಲ್ಲಿ ಈ ವಿಚಾರವಾಗಿ ಕ್ಷಮೆ ಕೋರುತ್ತಿದ್ದು, ಈ ವಿಷಯವನ್ನು ಇಲ್ಲಿಗೇ ಮುಕ್ತಾಯಗೊಳಿಸಲು ಕಾಂಗ್ರೆಸ್ ಮುಖಂಡರಲ್ಲಿ ಮನವಿ ಮಾಡಿಕೊಳ್ಳುತ್ತೇನೆ ಎಂದು ಹೊಸಳ್ಳಿ ತಿಳಿಸಿದ್ದಾರೆ.

ಸಾರ್ವಜನಿಕ ಜೀವನದಲ್ಲಿ ಪರಸ್ಪರ ಗೌರವ ಮತ್ತು ಶಾಂತಿಯುತ ರಾಜಕೀಯ ಸಂವಾದ ಮುಖ್ಯವಾಗಿದ್ದು, ಮುಂದಿನ ದಿನಗಳಲ್ಲಿ ಅಭಿವೃದ್ಧಿ ವಿಚಾರಗಳ ಬಗ್ಗೆ ಚರ್ಚೆ ನಡೆಯಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಪುರಸಭೆಯ ಅವ್ಯವಸ್ಥೆಗೆ ಶಾಸಕ ಪ್ರಭು ಚವ್ಹಾಣ ಕಿಡಿ

**ಕನ್ನಡ ಮಾತೃ ಭೂಮಿ ವಾರ್ತೆ**



**ಔರಾದ,** ಪಟ್ಟಣಕ್ಕೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ವಿಫಲತೆ, ಮಾಸ್ಟರ್ ಪ್ಲಾನ್ ಅನುಷ್ಠಾನದಲ್ಲಿ ವಿಳಂಬ, ಸ್ವಚ್ಛತಾ ಕಾರ್ಯಗಳ ನಿರ್ಲಕ್ಷ್ಯ ಹಾಗೂ ಅಭಿವೃದ್ಧಿ ಯೋಜನೆಗಳನ್ನು ಸರಿಯಾಗಿ ಜಾರಿಗೊಳಿಸದಿರುವುದಕ್ಕೆ ಪುರಸಭೆಯ ಅಧಿಕಾರಿಗಳ ವಿರುದ್ಧ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಔರಾದ ಪುರಸಭೆ ಸಭಾಂಗಣದಲ್ಲಿ ಸೋಮವಾರ ನಡೆದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಕುಡಿಯುವ ನೀರು ಸರಬರಾಜಿಗೆ ಕೋಟ್ಯಂತರ ಅನುದಾನ ತಂದಿದ್ದೇನೆ. ಕಾರಂಜಾ ಜಲಾಶಯದಿಂದ ಪಟ್ಟಣಕ್ಕೆ ನೀರು ತರುವ 84 ಕೋಟಿ ವೆಚ್ಚದ ಯೋಜನೆ ಚಾಲ್ತಿಯಲ್ಲಿದೆ. ಕೆಲಸ ಸರಿಯಾಗಿ ಆಗುತ್ತಿಲ್ಲ. ಮಾಂಜ್ರಾದಿಂದ ನೀರು ಸರಬರಾಜು ಮಾಡುವ ಯೋಜನೆ, ತೇಗಂಪೂರ ಕೆರೆಯಿಂದ ನೀರು ಸರಬರಾಜು ಮಾಡುವ ಯೋಜನೆಯೂ ಆಗಿದೆ. ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಹಣ ಖರ್ಚಾಗುತ್ತಿದೆಯೇ ವಿನಃ ಜನತೆಗೆ ನೀರು ಪೂರೈಕೆಯಾಗುತ್ತಿಲ್ಲ. ಈ ರೀತಿಯ ನಿರ್ಲಕ್ಷ್ಯ ಅಸಹನೀಯ ಎಂದು ಬೇಸರ ಹೊರಹಾಕಿದರು.

ಪಟ್ಟಣದಲ್ಲಿರುವ 20 ವಾರ್ಡ್‌ಗಳಲ್ಲಿಯು ನೀರಿನ ಸಮಸ್ಯೆಯಿದೆ. ಚರಂಡಿಗಳೆಲ್ಲ ತುಂಬಿದ್ದು, ಓಣಿಗಳಲ್ಲಿ ಸಂಚರಿಸಲು ಸಾಧ್ಯವಾಗುತ್ತಿಲ್ಲ. ಬ್ಲೀಚಿಂಗ್ ಪೌಡರ್ ಹಾಕುತ್ತಿಲ್ಲ. ಫಾಗಿಂಗ್ ಮಾಡುತ್ತಿಲ್ಲ. ಅಳವಡಿಸಿದ 12 ಹೈಮಾಸ್ಟ್ ದೀಪಗಳಲ್ಲಿ 10 ಕೆಟ್ಟಿವೆ. ಪೌರ ಕಾರ್ಮಿಕರ 18 ತಿಂಗಳ ವೇತನ ಪಾವತಿಸಿಲ್ಲ. ಎಪಿಎಂಸಿಯಿಂದ ಬಸವೇಶ್ವರ ವೃತ್ತದವರೆಗಿನ ರಸ್ತೆಯ ಫುಟ್‌ಪಾತ್ ಒತ್ತುವರಿಯಾಗಿದೆ. ರಸ್ತೆ ಮೇಲೆಲ್ಲ ತಳ್ಳು ಬಂಡಿಗಳು ಕಾಣಿಸುತ್ತಿವೆ. ಜನಸಾಮಾನ್ಯರಿಗೆ ಓಡಾಡಲು ಕಷ್ಟವಾಗುತ್ತಿದೆ. ಇಂಥವುಗಳನ್ನು ಏಕೆ ನಿರ್ಲಕ್ಷ್ಯ ವಹಿಸುತ್ತಿದ್ದೀರಿ ಎಂದು ಮುಖ್ಯಾಧಿಕಾರಿಗೆ ತರಾಟೆಗೆ ತೆಗೆದುಕೊಂಡರು.

ಪಟ್ಟಣದಲ್ಲಿ ಜಲ ಜೀವನ್ ಮಿಷನ್ ಯೋಜನೆ ಕಾಮಗಾರಿ ಸಂಪೂರ್ಣ ಕಳಪೆಯಾಗಿ ಮಾಡಲಾಗಿದೆ. ಆಮೀಷಗಳಿಗೆ ಒಳಗಾಗಿ ಅಧಿಕಾರಿಗಳು ಬಿಲ್ಲುಗಳನ್ನು ಪಾವತಿಸಿದ್ದಾರೆ. ಕಾರಂಜಾದಿಂದ ನೀರು ಸರಬರಾಜು ಯೋಜನೆಯ ಸ್ಥಳಕ್ಕೆ ನಾಲ್ಕು ಬಾರಿ ವೀಕ್ಷಣೆ ಮಾಡಿದ್ದೇನೆ. ನಿಮ್ಮ ಬಳಿ ಮಾಹಿತಿಯೂ ಸಿಗುತ್ತಿಲ್ಲ. ಮಾಂಜ್ರಾ ನದಿ, ಮುಸ್ತಾಪೂರ ಕೆರೆಯಿಂದ ನೀರು ಸರಬರಾಜು ಯೋಜನೆಗಳ ಒಳಗೊಂಡು ಪುರಸಭೆ ವ್ಯಾಪ್ತಿಯ ಕಾಮಗಾರಿಗಳ ಬಗ್ಗೆ ಸಮರ್ಪಕ ಮಾಹಿತಿ ಇಲ್ಲದಿರುವುದು ನಾಚಿಕೆಗೇಡಿತನ ಎಂದರು.

ಹಿಂದೆ ಔರಾದ-ಉದಗೀರಗೆ ಸಂಪರ್ಕ ಕಲ್ಪಿಸುವ ಪ್ರಮುಖ ರಸ್ತೆ ಇಂದು ಒತ್ತುವರಿಯಾಗಿ ಒಂದು ವಾಹನವೂ ಸಂಚರಿಸಲು ಸಾಧ್ಯವಾಗುತ್ತಿಲ್ಲ. ಈ ರಸ್ತೆಯ ಅಭಿವೃದ್ಧಿಗೆ 3 ಕೋಟಿ ಅನುದಾನ ನೀಡಿದ್ದೇನೆ. ಜಾಗ ಒತ್ತುವರಿಯಾದ ಕಾರಣ 3 ವರ್ಷವಾಗುತ್ತ ಬಂದರೂ ಕಾಮಗಾರಿ ಆರಂಭಗೊಂಡಿಲ್ಲ. ತಹಸೀಲ್ದಾರರು, ಪೊಲೀಸ್ ಸಿಬ್ಬಂದಿ ಕೂಡಲೇ ಕನಿಷ್ಟ ಚರಂಡಿವರೆಗಾದರೂ ಒತ್ತುವರಿ ತೆರವುಗೊಳಿಸಿ ರಸ್ತೆ ಕಾಮಗಾರಿ ಆರಂಭಿಸಲು ಕ್ರಮ ವಹಿಸಬೇಕೆಂದು ಹೇಳಿದರು.

**ಕರ ವಸೂಲಿಗೆ ನಿರ್ದೇಶನ:** ಹಣ ಕಾಸು ಕೊರತೆಯಿಂದಾಗಿ ಕಸದ ವಾಹ ನಗಳಿಗೆ ಡಿಸೇಲ್ ಹಾಕಿಸಲು ತೊಂದರೆ ಯಾಗುತ್ತಿದೆ ಎಂದು ಸಿಬ್ಬಂದಿಯೊಬ್ಬರು ಗಮನಕ್ಕೆ ತಂದಾಗ ಶಾಸಕರು, ತೆರಿಗೆಗಳನ್ನು ವ್ಯವಸ್ಥಿತವಾಗಿ ಕಟ್ಟಿಸಿಕೊಂಡಲ್ಲಿ ಕೋಟ್ಯಂತರ ಅನುದಾನ ಲಭ್ಯವಾಗಿ ಅಭಿವೃದ್ಧಿ ಕೆಲಸಗಳಿಗೆ ಬಳಸಿಕೊಳ್ಳಬ ಹುದು ಎಂದರು. ಕರ ವಸೂಲಿ ಮತ್ತು ಖರ್ಚು ವೆಚ್ಚಗಳ ಬಗ್ಗೆ ಸಮಗ್ರ ಮಾ ಹಿತಿ ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

**ಅಧಿಕಾರಿಗಳ ವಿರುದ್ಧ ಕ್ರಮ ವಹಿಸಿ:** ಪುರಸಭೆ ಕಾರ್ಯಾಲಯದಲ್ಲಿ ಒಬ್ಬ ಅಧಿಕಾರಿಗೆ ಹತ್ತಾರು ವಿಭಾಗಗಳ ಹೊಣೆಗಾರಿಕೆ ವಹಿಸಲಾಗಿದೆ. ಇದರಿಂದ ಯಾವೊಂದು ಕೆಲಸವೂ ಸರ್ಮಕವಾಗಿ ಆಗುತ್ತಿಲ್ಲ. ಕೆಲಸ ಮಾಡದವರಿಂದ ಜವಾಬ್ದಾರಿಗಳನ್ನು ಹಿಂಪಡೆಯಬೇಕು. ಎಲ್ಲ ವಿಭಾಗಗಳ ಕಾರ್ಯ ಚಟುವಟಿಕೆಗಳು ಅಚ್ಚುಕಟ್ಟಾಗಿ ನಡೆಯುವಂತೆ ಕ್ರಮ ವಹಿಸಬೇಕೆಂದು ತಿಳಿಸಿದರು.

**ತನಿಖೆಗೆ ಸೂಚನೆ:** ಹಿಂದೆ ಮುಖ್ಯಾಧಿಕಾರಿಯಾಗಿ ಕೆಲಸ ಮಾಡಿದ ಅಧಿಕಾರಿ ಕರ ವಸೂಲಿ ಸರಿಯಾಗಿ ಮಾಡಿಲ್ಲ. ಲಕ್ಷಾಂತರ ಹಣ ಲೂಟಿ ಮಾಡಿರುವ ಬಗ್ಗೆ ದೂರುಗಳಿವೆ. 20 ಪೌರ ಕಾರ್ಮಿಕರನ್ನು ನಿಯಮಗಳನ್ನು ಉಲ್ಲಂಘಿಸಿ ನೇಮಕ ಮಾಡಿಕೊಳ್ಳಲಾಗಿದೆ. ಅವರಿಗೆ ಆದೇಶ ಪತ್ರವೂ ಇಲ್ಲ. ಸಂಬಳವೂ ನೀಡದೇ ವಂಚಿಸಲಾಗಿದೆ.

ಇವರ ಅವಧಿಯಲ್ಲಿ ನಡೆದ ಅವ್ಯವಹಾರಗಳ ಬಗ್ಗೆ ತಹಸೀಲ್ದಾರರ ನೇತೃತ್ವದಲ್ಲಿ ಸಮಿತಿ ರಚಿಸಿ ಸಮಗ್ರ ತನಿಖೆ ನಡೆಸಬೇಕು ಎಂದು ಹೇಳಿದರು. ಈ ಕುರಿತು ಜಿಲ್ಲಾ ಧಿಕಾರಿಗಳು ಮತ್ತು ಬೀದರ ನಗರಾಭಿ ವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕರಿಗೆ ದೂರವಾಣಿ ಕರೆ ಮಾಡಿ ಈ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಸಭೆಯಲ್ಲಿ ತಹಸೀಲ್ದಾರರಾದ ಮಹೇಶ ಪಾಟೀಲ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಪುರಸಭೆ ಮುಖ್ಯಾಧಿಕಾರಿ ರವಿ ಸುಕುಮಾರ, ತಾಲ್ಲೂಕು ಆರೋಗ್ಯಾಧಿಕಾರಿ ಅನೀಲಕುಮಾರ, ಜೆಸ್ಕಾಂ ಎಇಇ ರವಿ ಕಾರಬಾರಿ ಸೇರಿದಂತೆ ವಿವಿಧ ವಿಭಾಗಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಸಭೆಗೂ ಮುನ್ನ ಶಾಸಕರು ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಸಂಚರಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

# ಮೆ.12ರಂದು ಬಾಬಾಸಾಹೇಬ್ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಕ್ಕೆ ಸಚಿವ ಪ್ರಿಯಾಂಕ ಖರ್ಗೆ ಆಗಮನ

**ಕನ್ನಡ ಮಾತೃ ಭೂಮಿ ವಾರ್ತೆ**



**ಅಫಜಲಪುರ,** ಪಟ್ಟಣದ ಬಾಬಾಸಾಹೇಬ್ ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ವತಿಯಿಂದ ಮಾಧ್ಯಮಗೋಷ್ಠಿ ನಡೆ ಯಿತು.

ಮಾಧ್ಯಮಗೊಷ್ಠಿ ಉದ್ದೇಶಿಸಿ ಮಾತನಾಡಿದ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಶಿವರಾಜ ಬಾದನಳ್ಳಿ ಮೇ.12 ರಂದು ಪಟ್ಟಣದ ನ್ಯಾಶನಲ್ ಫಂಕ್ಷನ್ ಹಾಲನಲ್ಲಿ ಡಾ.ಬಿ.ಆರ್.ಅಂಬೇಡ್ಕರ ಅವರ ಜಯಂತ್ಯೋತ್ಸವ ಕಾರ್ಯಕ್ರಮ ಅದ್ದೂರಿಯಾಗಿ ಜರುಗಲಿದ್ದು, ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಪಂಚಾಯತ ರಾಜ್ಯ ಹಾಗೂ ಗ್ರಾಮೀಣಾಭಿವೃದ್ಧಿ ಸಚೀವರಾದ ಪ್ರಿಯಾಂಕ ಖರ್ಗೆಜಿ ಅವರು ಆಗಮಿಸಲಿದ್ದಾರೆ. ಕಾರ್ಯಕ್ರಮ ದ ಅಧ್ಯಕ್ಷತೆಯನ್ನು ಶಾಸಕರಾದ ಎಮ್.ವೈ.ಪಾಟೀಲರು ವಹಿಸಿಕೊಳ್ಳಲಿದ್ದು, ತಾಲೂಕಿನ ರಾಜಕೀಯ ಧುರಿಣರು, ಅಂಬೇಡ್ಕರರ ಅಭಿಮಾನಿಗಳು, ಸರ್ವಸಮುದಾಯದ ಮುಖಂಡರುಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು.

ತದನಂತರ ಮಾತನಾಡಿದ ಹಿರಿಯ ಮುಖಂಡರಾದ ಭೀಮರಾವ್ ಗೌರ ಮೆ.12 ರಂದು ನಡೆಯುವ ಬಾಬಾ ಸಾಹೇಬ್ ಅಂಬೇಡ್ಕರವರ ಜಯಂತಿಯ ಬಹಿರಂಗ ಸಭೆಯು ಐತಿಹಾಸಿಕ ಕಾರ್ಯಕ್ರಮವಾಗಲಿದ್ದು, ಅಂದು ಬೆಳಿಗ್ಗೆ 11 ಗಂಟೆಗೆ ಬೃಹತ್ ಬಹಿರಂಗ ಸಭೆ ಪ್ರಾರಂಭವಾಗಲಿದೆ. ಕಾರ್ಯಕ್ರಮಕ್ಕೆ ಉದ್ಘಾಟಕರಾಗಿ ರಾಜ್ಯದ ಹೆಸರಾಂತ ವಾಕ್ ಚಾತುರ್ಯವುಳ್ಳ ಕಲಬುರಗಿ ಉಸ್ತುವಾರಿ ಸಚಿವರಾದ ಪ್ರಿಯಾಂಕ ಖರ್ಗೆ ಅವರು ಆಗಮಿಸಲಿದ್ದಾರೆ. ಅವರೊಟ್ಟಿಗೆ ಅನೇಕ ರಾಜಕೀಯ ದುರಿಣರು ಪಾಲ್ಗೊಳ್ಳಲಿದ್ದು ತಾಲೂಕಿನ ಸಮಸ್ತ ಜನತೆ ಕಾರ್ಯಕ್ರಮಕ್ಕೆ ಬಂದು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಇದೆ ಸಂದರ್ಭದಲ್ಲಿ ಮುಖಂಡರಾದ ಶಿವರಾಜ ಬಾದನಳ್ಳಿ, ಭೀಮರಾವ್ ಗೌರ, ಡಿ.ಎಸ್.ಎಸ್ ಜಿಲ್ಲಾ ಸಚಾಲಕ ಮಹಾಂತೇಶ ಬಡದಾಳ, ದಲಿತ ಸಮುದಾ ಯದ ಒಕ್ಕೂಟದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಡಿ.ಎಸ್.ಎಸ್ ತಾಲೂಕು ಸಂಚಾ ಲಕ ಮಹಾಲಿಂಗ ಅಂಗಡಿ, ದಲಿತಸೇನೆ ವಿಭಾಗೀಯ ಅಧ್ಯಕ್ಷ ಮಹಾಂತೇಶ ಬಳೂಂಡಗಿ, ಯುವ ಕಾಂಗ್ರೆಸ್ ಅಧ್ಯಕ್ಷ ಪ್ರವೀಣ ಕಲ್ಲೂರ, ಗೌತಮ್ಮ ಸಕ್ಕರಗಿ, ಶಾಮು ಅಳ್ಳಗಿ, ಸಂತೋಷ ಸಿಂಗೆ, ಮಂಜು ಬಟಗೇರಿ, ಶಿವಲಿಂಗ ಅರೆಕಾರ, ಮಹೇಶ ದೊಡ್ಮನಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜೇರಾಳ ಗ್ರಾಮದಲ್ಲಿ ಮಕ್ಕಳ ಹಕ್ಕುಗಳು ಮತ್ತು ಸುರಕ್ಷತೆಯ ಜಾಗೃತಿ

**ಕನ್ನಡ ಮಾತೃ ಭೂಮಿ ವಾರ್ತೆ**

**ಕೊಪ್ಪಳ,** ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟುವುದು ಮತ್ತು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡುವ ಉದ್ದೇಶದಿಂದ ಕನಕಗಿರಿ ತಾಲೂಕಿನ ಜೀರಾಳ ಗ್ರಾಮ ಪಂಚಾಯತ್ ಸಭಾಂಗಣದಲ್ಲಿ ಇತ್ತೀಚೆಗೆ ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ವಿವಿಧ ಇಲಾಖೆಗಳ ಸಂಯುಕ್ತಾಶ್ರಯ ದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ತಜ್ಞರು ಹಲವು ಪ್ರಮುಖ ವಿಷಯಗಳ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಶಿವಲೀಲಾ ವನ್ನೂರು ಅವರು ಮಾತನಾಡಿ, 18 ವರ್ಷದೊಳಗಿನ ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಸರ್ಕಾರ ತಂದಿರುವ ಪೋಕ್ಸೊ ಕಾಯ್ದೆ-2012 ರ ಬಗ್ಗೆ ವಿವರಿಸಿದರು. ಲೈಂಗಿಕ ದೌರ್ಜನ್ಯ ಎಸಗುವವರಿಗೆ ಕನಿಷ್ಠ 20 ವರ್ಷದಿಂದ ಜೀವಿತಾವಧಿಯವರೆಗೆ ಶಿಕ್ಷೆ ಮತ್ತು ದಂಡ ವಿಧಿಸಲು ಕಾನೂನಿನಲ್ಲಿ ಅವಕಾಶವಿದೆ ಎಂದು ಎಚ್ಚರಿಸಿದರು.

ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯಲ್ಲಿ ಜಾಗೃತಿಯನ್ನು ಮೂಡಿಸಲು ಗ್ರಾಮ ಮಟ್ಟದ ''ಮಕ್ಕಳ ರಕ್ಷಣಾ ಸಮಿತಿಯಲ್ಲಿ ಚರ್ಚಿಸಿ, ಮಕ್ಕಳ ಹಕ್ಕು ಗಳು, ಕಾನೂನುಗಳ ಮತ್ತು ಮಕ್ಕಳ ಸುರಕ್ಷತೆ ಕುರಿತು ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಿ, ತನ್ಮೂಲಕ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ಬಾಲ್ಯ ವಿವಾಹಗಳನ್ನು ತಡೆದು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸುವಂತೆ ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಪ್ರತಿಭಾ ಕಾಶಿಮಠ ಅವರು ಮಾತನಾಡಿ, ತಾಯಿ-ಶಿಶು ಮರಣ ಪ್ರಮಾಣ ತಗ್ಗಿಸಲು ಬಾಲ್ಯವಿವಾಹ ತಡೆಯುವುದು ಅನಿವಾ ರ್ಯ. ಕರ್ನಾಟಕ ರಾಜ್ಯ ತಿದ್ದುಪಡಿ ಕಾಯ್ದೆಯಂತೆ ಬಾಲ್ಯವಿವಾಹಗಳು ಅಸಿಂಧುಗೊಂಡಿದ್ದು, ಇಂತಹ ವಿವಾಹ ಆಯೋಜಿಸುವವರಿಗೆ ಕನಿಷ್ಠ 1 ರಿಂದ 2 ವರ್ಷ ಜೈಲು ಶಿಕ್ಷೆ ವಿಧಿಸಲಾಗುತ್ತದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜೀರಾಳ ಗ್ರಾ.ಪಂ ಆಡಳಿತಾಧಿಕಾರಿ ಅಭಿಲಾಷ ಅವರು ವಹಿಸಿದ್ದರು. ಪಂಚಾ ಯತ್ ಅಭಿವೃದ್ಧಿ ಅಧಿಕಾರಿಗಳಾದ ಚಂದುಸ್ವಾಮಿ ದೊಡ್ಡಮನಿ, ವಲಯ ಸಂಪನ್ಮೂಲ ವ್ಯಕ್ತಿಗಳಾದ ವಲಯ ಗೀತಾ, ಸಮೂಹ ಸಂಪನ್ಮೂಲ ಅಧಿಕಾರಿಗಳಾದ ಕೊಟ್ರೇಶ, ಸಹಾಯಕ ಪೊಲೀಸ್ ಆರಕ್ಷಕ ನಿರೀಕ್ಷಕರಾದ ನಿಂಗಪ್ಪ, ಶಿಶು ಕನಕಗಿರಿ ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇ ರಿಯ ಅಂಗನವಾಡಿ ಮೇಲ್ವಿಚಾರಕಿ ಚಂದ್ರ, ಕಲಾ ಸೇರಿದಂತೆ ಅಂಗನವಾಡಿ ಕಾರ್ಯ ಕರ್ತೆಯರು ಮತ್ತು ಶಾಲಾ ಶಿಕ್ಷಕರು ಭಾಗವಹಿಸಿದ್ದರು.

ಜೀರಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶ್ರೀಕಾಂತ ಪ್ರಾಸ್ತಾವಿಕವಾಗಿ ಮಾತನಾಡಿದರು. ರಮೇಶ ವಂದಿಸಿದರು ಮತ್ತು ಕುಮಾರಿ ಯಮುನಾ ಕಾರ್ಯಕ್ರಮ ನಿರೂಪಿಸಿದರು.

# ...ಮೊದಲನೇ ಪುಟದಿಂದ

## ರಾಜ್ಯದಲ್ಲಿ 88.06 ಲಕ್ಷ ಮನೆಗಳಿಗೆ ನಳಸಂಪರ್ಕ-ಕೇಂದ್ರಕ್ಕೆ ಸಿಎಂ ಮಾಹಿತಿ

ಈ ಹಿನ್ನೆಲೆಯಲ್ಲಿ ಪ್ರತಿಯೊಂದು ಗ್ರಾಮೀಣ ಕುಟುಂಬಗಳಿಗೆ ಕುಡಿಯಲು ಯೋಗ್ಯವಾದ ನೀರನ್ನು ಒದಗಿಸುವ ನಿಟ್ಟಿನಲ್ಲಿ ಜಲಮೂಲಗಳ ಸುಧಾರಣೆ ಮತ್ತು ಬೃಹತ್ ನೀರಿನ ಸರಬರಾಜು ವ್ಯವಸ್ಥೆಗೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು. ಕುಡಿಯುವ ನೀರಿನ ಕಾಮಗಾರಿಗಳ ಅನುಷ್ಠಾನದಲ್ಲಿ ಕರ್ನಾಟಕ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ ಗುಣ ಮಟ್ಟವನ್ನು ಕಾಯ್ದುಕೊಂಡಿದೆ. ಈ ಯೋಜ ನೆಯಡಿಯ ಪ್ರತಿಯೊಂದು ಕಾಮಗಾರಿಗಳನ್ನು ಮೂರನೇ ಏಜೆನ್ಸಿ ಮೂಲಕ ಪರಿಶೀಲನೆ ನಡೆಸಲಾಗುತ್ತಿದ್ದು, ಪಾರದರ್ಶಕತೆಗೆ ಒತ್ತು ನೀಡಲಾಗಿದೆ ಎಂದರು.

ರಾಜ್ಯದಲ್ಲಿ 101.31 ಲಕ್ಷ ಗ್ರಾಮೀಣ ಕುಟುಂಬಗಳ ಪೈಕಿ 88.06 ಲಕ್ಷ ಮನೆಗಳಿಗೆ ನಳಸಂಪರ್ಕ ಕಲ್ಪಿಸಿದ್ದು, ಶೇ.86.93ರಷ್ಟು ಪ್ರಗತಿ ಸಾಧಿಸಲಾಗಿದೆ. ಈಗಾಗಲೇ ಕೈಗೊಳ್ಳಲಾಗಿರುವ 66,344 ಕಾಮಗಾರಿಗಳ ಪೈಕಿ ಸುಮಾರು 48,789 ಕಾಮಗಾರಿಗಳು ಭೌತಿಕವಾಗಿ ಪೂರ್ಣಗೊಂಡಿವೆ. ಇದರಲ್ಲಿ ಗ್ರಾಮಗಳಲ್ಲಿ 28,809 ಕಾಮಗಾರಿಗಳು ಗ್ರಾಮಗಳಲ್ಲಿ ಹಾಗೂ 19,980 ಕಾಮಗಾರಿಗಳು ಶಾಲೆ, ಅಂಗನವಾಡಿಗಳಲ್ಲಿ ಕೈಗೊಳ್ಳಲಾಗಿದ್ದು, ಗ್ರಾಮೀಣ ಮಟ್ಟದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಒತ್ತು ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಕೇಂದ್ರ ಸರ್ಕಾರದ ಅಸಹಕಾರದ ನಡುವೆಯೂ, ಕರ್ನಾಟಕ 17,554.63 ಕೋಟಿ ರೂ. ಬಂಡವಾಳ ಹೂಡಿದೆ. ಇದರಲ್ಲಿ ಕೇಂದ್ರದ ಪಾಲಿನ ನಿರೀಕ್ಷೆಯಲ್ಲಿ ಹೂಡಲಾಗಿರುವ 8,880.71 ಕೋಟಿ ರೂ.ಗಳೂ ಸೇರಿದ್ದು, ಯೋಜನೆಗಳ ಪೂರ್ಣಗೊಳಿಸುವ ನಿಟ್ಟಿನಲ್ಲಿ ನಮ್ಮ ಬದ್ಧತೆ ತೋರಿಸುತ್ತದೆ. ಯೋಜನೆ ಅನುಷ್ಠಾನದಲ್ಲಿ ರಾಜ್ಯ ಯಾವುದೇ ರಾಜಿ ಮಾಡದೆ, ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡುತ್ತಿದ್ದರೂ, ಕೇಂದ್ರ ಸರ್ಕಾರ ಅನುದಾನ ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದು ದುರದೃಷ್ಟಕರ ಎಂದು ಸಿಎಂ ಬೇಸರ ವ್ಯಕ್ತಪಡಿಸಿದರು.

## ವಿಚ್ಛೇದನಕ್ಕೆ ಮದುವೆ ನೋಂದಣಿಯ ಅಗತ್ಯವಿಲ್ಲ: ಹೈಕೋರ್ಟ್

ಅಗತ್ಯವಾದ ಷರತ್ತುಗಳನ್ನು ಮಾತ್ರ ಹೇಳುತ್ತದೆ. ಮದುವೆಯ ನೋಂದಣಿ ಇಲ್ಲದಿದ್ದರೆ ವಿಚ್ಛೇದನ ಅರ್ಜಿ ಸಲ್ಲಿಸಲಾಗುವುದಿಲ್ಲ ಎಂದು ಹೇಳುವುದಿಲ್ಲ ಎಂದು ಪೀಠ ತಿಳಿಸಿದೆ. ಅಲ್ಲದೆ, ಸೆಕ್ಷನ್ 15ರಡಿ ಮದುವೆ ನೋಂದಣಿ ಆಯ್ಕೆಟಿ ಆಗಿದ್ದು, ಕಡ್ಡಾಯವಲ್ಲ ಎಂದು ಸ್ಪಷ್ಟಪಡಿಸಿದೆ. ನೋಂದಣಿ ಮಾಡಿದಲ್ಲಿ ಸೆಕ್ಷನ್ 18ರಡಿ ಕೆಲವು ಹೆಚ್ಚುವರಿ ಕಾನೂನು ಪ್ರಯೋಜನಗಳು ದೊರೆಯುತ್ತವೆ. ಆದರೆ ನೋಂದಣಿ ಇಲ್ಲದಿದ್ದರೆ ವಿಚ್ಛೇದನ ಅರ್ಜಿ ಸಲ್ಲಿಸಲು ಅಡ್ಡಿಯಾಗುವುದಿಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ.

ಪ್ರಕರಣದ ಹಿನ್ನೆಲೆ: ಪರಿಶಿಷ್ಟ ಪಂಗಡಕ್ಕೆ ಸೇರಿದ್ದ ಮೆಡಾ ಎಂಬ ಜನಾಂಗಕ್ಕೆ ಸೇರಿದ ದಂಪತಿ 2006ರ ಏಪ್ರಿಲ್‌ನಲ್ಲಿ ತಮ್ಮ ಸಮುದಾಯದ ಆಚರಣೆಗಳ ಪ್ರಕಾರ ಮದುವೆಯಾಗಿದ್ದರು. ಆದರೆ, ಮದುವೆಯನ್ನು ವಿಶೇಷ ವಿವಾಹ ಕಾಯ್ದೆಯಡಿ ನೋಂದಾಯಿಸಿರಲಿಲ್ಲ. ಇವರಿಗೆ ಒಂದು ಮಗು ಜನಿಸಿತ್ತು. ಆದರೆ, 2009ರಿಂದ ದಂಪತಿ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಪ್ರಕರಣದಲ್ಲಿ ಪತಿಯು ಕನಕಪುರ ಕೌಟುಂಬಿಕ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ, ಹಿಂದೂ ವಿವಾಹ ಕಾಯ್ದೆಯಡಿ ವಿಚ್ಛೇದನ ಕೋರಿದ್ದರು. ಆ ಅರ್ಜಿ ತಿರಸ್ಕಾರವಾಗಿತ್ತು. ಬಳಿಕ ಪತಿಯ ಕ್ರೌರ್ಯ ಮತ್ತು ಪರಿತ್ಯಾಗ(ದೂರ ನೆಲೆಸಿರುವುದು)ದ ಆಧಾರದಲ್ಲಿ ವಿಚ್ಛೇದನ ಕೋರಿ ಪತ್ನಿ ಅರ್ಜಿ ಸಲ್ಲಿಸಿದ್ದರು.

## ತನಿಖೆಗೆ ನೀಡಿದ್ದ ತಡೆ ತೆರವುಗೊಳಿಸಲು ನಿರಾಕರಿಸಿದ ಹೈಕೋರ್ಟ್

ರದ್ದು ಕೋರಿ ಪಿಪಿಇ ಕಿಟ್ ಪೂರೈಸಿದ್ದ ಲಾಜ್ ಎಕ್ಸಪೋರ್ಟ್ ಲಿಮಿಟೆಡ್ ಹಾಗೂ ಪ್ರೂಡಂಟ್ ಮ್ಯಾನೇಜ್ಮೆಂಟ್ ಸೊಲ್ಯೂಷನ್ಸ್ ಕಂಪನಿಗಳು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದವು. ಈ ಅರ್ಜಿಯು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠದ ಮುಂದೆ ವಿಚಾರಣೆಗೆ ಬಂದಿತ್ತು. ಈ ವೇಳೆ ಸರ್ಕಾರದ ಪರ ವಕೀಲರು, ಇದು ಹಣ ದುರುಪಯೋಗದ ಪ್ರಕರಣವಾಗಿದೆ. ಪಿಪಿಇ ಕಿಟ್‌ಗಳನ್ನು ಪೂರೈಸಲಾಗಿಲ್ಲ ಎಂಬುದು ಸಾಬೀತಾಗಿದೆ. ತನಿಖೆ ಬಹುತೇಕ ಪೂರ್ಣಗೊಂಡಿದೆ. ಮುಂದಿನ ಪ್ರಕ್ರಿಯೆಗೆ ಅನುಕೂಲವಾಗಲು ಮಧ್ಯಂತರ ಆದೇಶ ತೆರವುಗೊಳಿಸುವಂತೆ ಕೋರಿದರು. ಆದರೆ, ಮಧ್ಯಂತರ ಆದೇಶ ತೆರವುಗೊಳಿಸಲು ನಿರಾಕರಿಸಿದ ನ್ಯಾಯಪೀಠ ವಿಚಾರಣೆಯನ್ನು ಜೂನ್ 2ಕ್ಕೆ ಮುಂದೂಡಿತು. ಪ್ರಕರಣದಲ್ಲಿ ಲಾಜ್ ಎಕ್ಸ್‌ಪೋರ್ಟ್ ಲಿಮಿಟೆಡ್ ಮತ್ತು ಪ್ರೂಡೆಂಟ್ ಮ್ಯಾನೇಜ್ಮೆಂಟ್ ಸೊಲ್ಯೂಷನ್ಸ್ ನಿರ್ದೇಶಕರ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ 2024ರ ಡಿಸೆಂಬರ್ 16ಕ್ಕೆ ನ್ಯಾಯಪೀಠ ಮಧ್ಯಂತರ ಆದೇಶ ನೀಡಿತ್ತು. ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ, ಸರ್ಕಾರದ ಪರ ವಕೀಲರು, ಪಿಪಿಇ ಕಿಟ್‌ಗಳನ್ನು ಸರಬರಾಜು ಮಾಡದೇ ಹಣ ದುರುಪಯೋಗವಾಗಿದೆ. ಈ ಸಂಬಂಧ ನಡೆಯುತ್ತಿರುವ ತನಿಖೆ ಬಹುತೇಕ ಪೂರ್ಣಗೊಂಡಿದೆ. ಆದ್ದರಿಂದ ಪ್ರಕರಣದ ತನಿಖೆಗೆ ನೀಡಿರುವ ತಡೆಯಾಜ್ಞೆ ತೆರವು ಮಾಡಬೇಕು ಎಂದು ಕೋರಿದರು. ಇದಕ್ಕೆ ಪೀಠ, ಇದೇ ಆರೋಪ ಸಂಬಂಧ ಮತ್ತೊಂದು ಅರ್ಜಿ ವಿಚಾರಣಾ ಹಂತದಲ್ಲಿದೆ. ಈ ಹಂತದಲ್ಲಿ ತನಿಖೆ ಮುಂದುವರೆಸಿದರೆ ಅದು ಆ ಪ್ರಕರಣದ ಮೇಲೆ ಪರಿಣಾಮ ಬೀರಲಿದೆ.

## ಮಂಡ್ಯ: ಅಕ್ರಮ ಭ್ರೂಣ ಪತ್ತೆ, ಹತ್ಯೆ ಪ್ರಕರಣ ಮೂವರು ವೈದ್ಯರ ಬಂಧನ

ಮತ್ತು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದವು. ಬಂಧಿತರ ವಿರುದ್ಧ ಕಲಂ 65(1), 64(2)(ಎಂ), 376(2)(ಎನ್) ಭಾರತೀಯ ನ್ಯಾಯ ಸಂಹಿತೆ-2023 ಮತ್ತು 6 ಮತ್ತು 21 ಪೋಕ್ಸೋ ಕಾಯ್ದೆ 2017ರಡಿ ಒಟ್ಟು 12 ಮೊಕದ್ದಮೆ ದಾಖಲು ಮಾಡಲಾಗಿದೆ. ಏ.17ರಂದು ಏಕಕಾಲಕ್ಕೆ ಜಿಲ್ಲೆಯ ವಿವಿಧ ಕಡೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದರು.

## ಖರ್ಗೆ ಸಿಎಂ ಪ್ರಶ್ನೆ ಹೈಕಮಾಂಡ್ ನಿರ್ಧಾರಕ್ಕೆ ಅವಲಂಬಿತ: ಯತೀಂದ್ರ

ಡಿಸಿಎಂ ಡಿ.ಕೆ. ಶಿವಕುಮಾರ್ ಹುಟ್ಟುಹಬ್ಬದ ಸಂದರ್ಭದಲ್ಲಿ ಹೈಕಮಾಂಡ್ ಗುಡ್ ನ್ಯೂಸ್ ನೀಡಬಹುದು ಎನ್ನುವ ವಿಚಾರಕ್ಕೆ, ಹೈಕಮಾಂಡ್ ಏನು ತೀರ್ಮಾನ ಮಾಡಿದರೂ ಎಲ್ಲರೂ ಬದ್ಧರಾಗಿರುತ್ತೇವೆ ಎಂದರು.

ದೆಹಲಿಯಲ್ಲಿ ನಡೆದ ಡಿನ್ನರ್ ಮೀಟಿಂಗ್ ಹಾಗೂ ಸಚಿವ ಸ್ಥಾನ ಆಕಾಂಕ್ಷಿಗಳ ಸರಣಿ ಭೇಟಿಗಳ ಕುರಿತು ಪ್ರತಿಕ್ರಿಯಿಸಿ, ಮೂರು ವರ್ಷಗಳಾದ ಮೇಲೆ ಸಂಪುಟ ಪುನರ್ ರಚನೆ ಆಗಬಹುದು ಎಂಬ ನಿರೀಕ್ಷೆ ಇರುತ್ತದೆ. ಹೀಗಾಗಿ ದೆಹಲಿಗೆ ಹೋಗುವುದರಲ್ಲಿ ತಪ್ಪೇನಿಲ್ಲ ಎಂದು ಹೇಳಿದರು.ಈ ಸಂದರ್ಭದಲ್ಲಿ ಗ್ರಾಮೀಣ ಶಾಸಕ ಬಸನಗೌಡ ದದ್ದಲ್, ಪವನ್ ಕಿಶೋರ ಪಾಟೀಲ್, ನಾಗವೇಣಿ ಪಾಟೀಲ್, ಯೂಸೂಫ್ ಖಾನ್, ಬಶೀರ್ ಅಹ್ಮದ್ ಸೇರಿದಂತೆ ಅನೇಕರಿದ್ದರು.

## ಎನ್‌ಜಿಒ ಶಾಲಾ ಕಾಂಪೌಂಡ್ ನಿರ್ಮಾಣಕ್ಕೆ ಭೂಮಿ ಪೂಜೆ

ಶೈಕ್ಷಣಿಕ ಅಭಿವೃದ್ಧಿಗೆ ಈ ಶಾಲೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದರು. ಕಾಂಪೌಂಡ್ ನಿರ್ಮಾಣದಿಂದ ವಿದ್ಯಾರ್ಥಿಗಳ ಸುರಕ್ಷತೆ ಹೆಚ್ಚುವ ಜೊತೆಗೆ ಶಿಕ್ಷಣದ ಗುಣಮಟ್ಟಕ್ಕೂ ಸಹಕಾರಿಯಾಗಲಿದೆ. ಶಾಲೆಗೆ ಭವಿಷ್ಯದಲ್ಲಿ ಕಟ್ಟಡ ನಿರ್ಮಾಣಕ್ಕೆ ಅನುದಾನ ಅಗತ್ಯವಿದ್ದರೆ ನೀಡಲು ತಾನು ಸದಾ ಸಿದ್ಧನಿದ್ದೇನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಮಾಜಿ ಪಾಲಿಕೆ ಸದಸ್ಯ ಎನ್.ಕೆ. ನಾಗರಾಜ, ಹೇಮಲತಾ ಬೂದೆಪ್ಪ, ಮಾಜಿ ನಗರಸಭೆ ಸದಸ್ಯ ಪಿ. ಯಲ್ಲಪ್ಪ, ಸಂಘದ ಅಧ್ಯಕ್ಷ ನಾಗರೆಡ್ಡಿ ಹಂಚಿನಾಳ, ಉಪಾಧ್ಯಕ್ಷೆ ಕೆ. ಗಿರಿಜಾ, ನಿರ್ದೇಶಕರುಗಳಾದ ನಾಮದೇವ, ಮಲ್ಲಯ್ಯ, ಮಲ್ಲಿಕಾರ್ಜುನ ನಾಡಗೌಡ, ಮಾಜಿ ಅಧ್ಯಕ್ಷ ಬಾಬು ಭಂಡಾರಿಗಲ್ ಹಾಗೂ ಹಲವು ಮುಖಂಡರು ಉಪಸ್ಥಿತರಿದ್ದರು.

## ಬಿಸಿಲಿನ ತಾಪಕ್ಕೆ ನರೇಗಾ ಕೂಲಿಕಾರ ಸಾವು ಪರಿಹಾರಕ್ಕೆ ಪ್ರಾಂತ ರೈತ ಸಂಘ ಆಗ್ರಹ

ಎರಡನೇ ಹಾಜರಿಗಾಗಿ ಜಿಪಿಎಸ್ ಫೋಟೋ ತೆಗೆದುಕೊಳ್ಳುವ ವೇಳೆ ಹುಸೇನಪ್ಪ ಲೋ ಬಿಪಿಯಿಂದ ಕುಸಿದು ಬಿದ್ದಿದ್ದು, ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಮೃತರು ಕುಟುಂಬದ ಮುಖ್ಯ ಆಧಾರವಾಗಿದ್ದು, ಇಬ್ಬರು ಮಕ್ಕಳನ್ನು ಅಗಲಿದ್ದಾರೆ. ಹಿರಿಯ ಪುತ್ರನು ಬಿ.ಎ. ಪದವಿ ಪೂರ್ಣಗೊಳಿಸಿ ಪೊಲೀಸ್ ತರಬೇತಿಗೆ ಸಿದ್ಧವಾಗಿದ್ದರೆ, ಕಿರಿಯ ಪುತ್ರನು ಎಸ್.ಎಸ್.ಎಲ್.ಸಿ. ಉತ್ತೀರ್ಣನಾಗಿ ಪಿಯುಸಿ ಪ್ರವೇಶಕ್ಕೆ ಸಿದ್ಧನಾಗಿದ್ದಾನೆ. ಈ ಘಟನೆಯಿಂದ ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ. ಮನರೇಗಾ ನಿಯಮಾವಳಿಗಳ ಪ್ರಕಾರ ಕೆಲಸದ ಸ್ಥಳದಲ್ಲಿ ಕುಡಿಯುವ ನೀರು, ನೆರಳು ಹಾಗೂ ವಿಶ್ರಾಂತಿ ವ್ಯವಸ್ಥೆ ಕಲ್ಪಿಸಬೇಕಾಗಿದ್ದರೂ ಅವುಗಳ ಕೊರತೆಯಿಂದ ಸುಮಾರು 44 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಕೆಲಸ ಮಾಡುವ ವೇಳೆ ಈ ದುರ್ಘಟನೆ ಸಂಭವಿಸಿದೆ ಎಂದು ಆರೋಪಿಸಿದರು. . ಮೃತರ ಕುಟುಂಬಕ್ಕೆ ರೂ. 25 ಲಕ್ಷ ಪರಿಹಾರ ನೀಡಬೇಕು, ಹಿರಿಯ ಮಗನಿಗೆ ಸರ್ಕಾರಿ ಉದ್ಯೋಗ ಒದಗಿಸಬೇಕು, ಕಿರಿಯ ಮಗನ ವಿದ್ಯಾಭ್ಯಾಸದ ಹೊಣೆಗಾರಿಕೆಯನ್ನು ಸರ್ಕಾರ ವಹಿಸಿಕೊಳ್ಳಬೇಕು ಹಾಗೂ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಕೆ.ಜಿ. ವೀರೇಶ, ರಂಗನಗೌಡ ಕೊತ್ತದೊಡ್ಡ, ಕಾರ್ಯದರ್ಶಿ ರಂಗಪ್ಪ ಯಾಪಲದಿನ್ನಿ, ಸೇರಿದಂತೆ ಅನೇಕರು ಇದ್ದರು.

## ಧಾರವಾಡ: ಗಾಂಜಾ ಪ್ರಕರಣದಲ್ಲಿ ಹಣ ಕೇಳಿದ್ದಕ್ಕೆ ಬಿಎಸ್‌ಸಿ ವಿದ್ಯಾರ್ಥಿ ಆತ್ಮಹತ್ಯೆ ಆರೋಪ-ಮೂವರು ಪೊಲೀಸರು ಅಮಾನತು

ಇಬ್ಬರು ವಿದ್ಯಾರ್ಥಿಗಳು ಗಾಂಜಾ ಸೇವಿಸಿದ್ದು ಕೂಡ ಖಚಿತವಾಗಿದ್ದು, ಅವರ ಮೇಲೆ ಸಹ ಕೇಸ್ ದಾಖಲಾಗಿದೆ.

ಪೊಲೀಸ್ ಆಯುಕ್ತರ ಪ್ರತಿಕ್ರಿಯೆ: ಮೃತ ವಿದ್ಯಾರ್ಥಿಯ ಪೋಷಕರು ಯುಡಿಆರ್ ದೂರು ನೀಡಿದ್ದಾರೆ. ಅಲ್ಲದೆ, ಡ್ರಗ್ಸ್ ಟೆಸ್ಟ್ ನೆಗೆಟಿವ್ ಬಂದರೂ ಪೊಲೀಸರು 2 ಸಾವಿರ ಹಣ ಕೇಳಿದ್ದರು ಎಂದು ಪೋಷಕರು ಆರೋಪಿಸಿದ್ದಾರೆ.

ಈ ಹಿನ್ನೆಲೆ ಯಲ್ಲಿ ಸಾರ್ವಜನಿಕರಿಗೆ ತಪ್ಪು ಅಭಿಪ್ರಾಯ ಮೂ ಡುವ ರೀತಿಯ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಮೂವರು ಪೊಲೀಸ್ ಸಿಬ್ಬಂದಿಯನ್ನು ಅಮಾನತು ಮಾಡಿದ್ದೇನೆ. ಈ ಸಂಬಂಧ ನಮ್ಮ ಕಾನೂನು ಸುವ್ಯವಸ್ಥಾ ಡಿಸಿಪಿ ಶ್ರುತಿ ಅವರು ತನಿಖೆ ಮಾಡುತ್ತಿದ್ದಾರೆ.

# ಪೊಲೀಸರಿಂದ ಡ್ರೋನ್ ಕಾರ್ಯಾಚರಣೆ : ಕಾಡಿನಲ್ಲಿ ಜೂಜಾಡುತ್ತಿದ್ದ 19 ಮಂದಿ ವಿರುದ್ಧ ಎಫ್‌ಐಆರ್

**ಶಿವಮೊಗ್ಗ,ಏ.29-**ಕಾಡಿನಲ್ಲಿ ಅಕ್ರಮ ವಾಗಿ ನಡೆಯುತ್ತಿದ್ದ ಜೂಜಾಟದ ಮೇಲೆ ಜಿಲ್ಲಾ ಪೊಲೀಸರು ಡ್ರೋನ್ ಕಣ್ಗಾವಲು ಹಾಕಿದ್ದು, ಜೂಜಾಟದಲ್ಲಿ ತೊಡಗಿದ್ದ 19 ಮಂದಿಯ ಮೇಲೆ ಭದ್ರಾವತಿ ಗ್ರಾಮಾಂ ತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಭದ್ರಾವತಿ ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಜೂಜಾಟ್ ನಡೆಸಲಾಗುತ್ತಿತ್ತು. ಈ ಕುರಿತು ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಕೇಳಿ ಬಂದಿತ್ತು. ಈ ಕುರಿತು ಪೊಲೀಸರು ಕಾರ್ಯಾಚರಣೆಗೆ ಇಳಿದಾಗ ಜೂಜಾಟದಲ್ಲಿ ತೊಡಗಿದ್ದವರು ಪರಾರಿಯಾಗುತ್ತಿದ್ದರು.

ಇದರಿಂದ ಜಿಲ್ಲಾ ಪೊಲೀಸರು ಆಧುನಿಕ ಸಾಧನವಾದ ಡ್ರೋನ್ ಬಳಸಿಕೊಂಡು ಕಾರ್ಯಾಚರಣೆ ನಡೆಸಿದ್ದಾರೆ. ಈ ಹಿಂದೆ ಪೊಲೀಸರು ಗಾಂಜಾ ಮಾರಾಟ ಹಾಗೂ ಗಾಂಜಾ ಸೇವನೆ ಮಾಡುವವರ ಮತ್ತು ಮೆರವಣಿಗೆಗಳ್ ಮೇಲೆ ನಿಗಾ ಇಡಲು ಡ್ರೋನ್ ಬಳಸುತ್ತಿದ್ದರು. ಇದೀಗ ಅಕ್ರಮ ವಾಗಿ ಜೂಜಾಟ ನಡೆಸುವವರ ಮೇಲೆ ಡ್ರೋನ್ ಕಾರ್ಯಾಚರಣೆ ನಡೆಸಿದ್ದಾರೆ. ನಗರ ಪ್ರದೇಶದಲ್ಲಿ ಜೂಜಾಟಕ್ಕೆ ಪೊಲೀಸರು ಬ್ರೇಕ್ ಹಾಕಿದ್ದರಿಂದ ಜೂಜಾಟದ ದಂಧೆ ನಡೆಸುವವರು ಅರಣ್ಯ ಪ್ರದೇಶ ಸೇರಿದ್ದರು. ಇದೀಗ ಪೊಲೀಸರು ಅರಣ್ಯ ಪ್ರದೇಶಕ್ಕೂ ಲಗ್ಗೆ ಇಟ್ಟು ಅಕ್ರಮ ಜೂಜಾಟಕ್ಕೆ ಬ್ರೇಕ್ ಹಾಕಿದ್ದಾರೆ. ಶಿವಮೊಗ್ಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಹಾಗೂ ಪೊಲೀಸ್ ಸಿಬ್ಬಂದಿಯ ಕಾರ್ಯಾಚರಣೆಗೆ ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.ಅಕ್ರಮ ಭ್ರೂಣ ಪತ್ತೆ, ಹತ್ಯೆ ಪ್ರಕರಣ; ಮೂವರು ವೈದ್ಯರ ಬಂಧನ: ಮಂಡ್ಯದ ಕೆ.ಆರ್.ಪೇಟೆಯ ಡಯಾಗ್ನಸ್ಟಿಕ್ ಸೆಂಟರ್‌ನಲ್ಲಿ ಅಕ್ರಮ ಭ್ರೂಣ ಪತ್ತೆ, ಹತ್ಯೆ ಆರೋಪದ ಮೇಲೆ ಮೂವರು ಖಾಸಗಿ ವೈದ್ಯರನ್ನು ಬಂಧಿಸಲಾಗಿದೆ. ಪಟ್ಟಣದ ಚೇತನಾ ನರ್ಸಿಂಗ್ ಹೋಮ್‌ನ ವೈದ್ಯೆ ಡಾ.ದಿವ್ಯಾ, ನಾವಿ ಡಯಾಗ್ನಸ್ಟಿಕ್ ಸೆಂಟರ್‌ನ ವೈದ್ಯ ಡಾ.ಹರ್ಷಿತ್ ಹಾಗೂ ಕುಶಾಲ್ ಡಯಾಗ್ನಸ್ಟಿಕ್ ಸೆಂಟರ್‌ನ ಡಾ.ಪರೀಶ್ ಬಂಧಿತರು. ಪ್ರಕರಣ ಸಂಬಂಧ 31 ಬಾಲಗರ್ಭಿಣಿಯರಿಗೆ ಕಾನೂನುಬಾಹಿರವಾಗಿ ಸ್ಕ್ಯಾನಿಂಗ್ ಮಾಡಿರುವ ಆರೋಪದ ಮೇರೆಗೆ ಮೂವರು ವೈದ್ಯರನ್ನು ಪೊಲೀಸರು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಪಟ್ಟಣದ ಸರ್ಕಾರಿ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಪ್ರಿಯಾಂಕಾ ನಾಪತ್ತೆಯಾಗಿದ್ದು, ಪತ್ತೆ ಶೋಧ ನಡೆಸಲಾಗುತ್ತಿದೆ.ಪಟ್ಟಣ ಮತ್ತು ಗ್ರಾಮಾಂತರ ಠಾಣೆಗಳಲ್ಲಿ ಒಟ್ಟು 17 ಆರೋಪಿಗಳ ವಿರುದ್ಧ 12 ಪ್ರತ್ಯೇಕ ಎಫ್‌ಐಆರ್‌ಗಳು ದಾಖಲಾಗಿವೆ. ಸರ್ಕಾರಿ ವೈದ್ಯೆ, ಮೂವರು ಖಾಸಗಿ ವೈದ್ಯರು, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ಆಶಾ ಕಾರ್ಯಕರ್ತೆ ಹಾಗೂ ಖಾಸಗಿ ವ್ಯಕ್ತಿಗಳ ವಿರುದ್ಧ ದೂರು ದಾಖಲಾಗಿದೆ. ಲೋಕಾಯುಕ್ತ ಸಂಸ್ಥೆಯಲ್ಲೂ ಸ್ವಯಂಪ್ರೇರಿತ ಪ್ರಕರಣ ದಾಖಲಾಗಿದೆ.

# ಚಿತ್ರದುರ್ಗದಲ್ಲಿ ಮೇ.9ಕ್ಕೆ ಬಿಎಸ್‌ವೈ ಅಭಿಮಾನೋತ್ಸವ-ಬಿ.ವೈ.ವಿಜಯೇಂದ್ರ

**ವಿಜಯನಗರ,ಏ.29-**ನಾಡು ಕಂಡಂತ ಅಪ್ರತಿಮ ಹೋರಾಟಗಾರ, ರೈತ ನಾಯಕ ಯಡಿಯೂರಪ್ಪನವರ ರಾಜಕೀಯ ಪಯಣ 50 ವರ್ಷ ಪೂರೈಸಿದೆ. ಇದರಿಂದ ಅವರಿಗೆ ಅಭಿನಂದಿಸಲು ಕಾರ್ಯಕ್ರಮ ಮಾಡಲಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದರು.



ಹೊಸಪೇಟೆಯ ಬಿಜೆಪಿ ಕಚೇರಿಯಲ್ಲಿ ಮಾತನಾಡಿದ ಅವರು, ಎಲ್ಲಾ ಹಿರಿಯರು, ಗುರುಗಳು ಕೂತು ಕಾರ್ಯಕ್ರಮ ನಿಶ್ಚಯ ಮಾಡಲಾಗಿದೆ. ಮೇ 9ರಂದು ಚಿತ್ರದುರ್ಗ ನಗರದಲ್ಲಿ ಯಡಿಯೂರಪ್ಪನವರ ಅಭಿಮಾನೋತ್ಸವ ಆಯೋಜನೆ ಮಾಡಿದ್ದೇವೆ ಎಂದರು.

ಕಾರ್ಯಕ್ರಮಕ್ಕೆ ಗೃಹ ಸಚಿವ ಅಮಿತ್ ಶಾ ಅವರು ಬರಲಿದ್ದಾರೆ. ನಾಡಿನ ಎಲ್ಲಾ ಜಗದ್ಗುರುಗಳು, ಹರಚರಮೂರ್ತಿಗಳು ವೇದಿಕೆ ಮೇಲೆ ಇರುತ್ತಾರೆ.

ರಾಜ್ಯದ ಮೂಲೆ, ಮೂಲೆಗಳಿಂದ 8-10 ಲಕ್ಷ ಜನ ಬರುತ್ತಾರೆ. 8ರಂದು ಸಂಜೆ 5 ಗಂಟೆಗೆ ಪುರ ಪ್ರವೇಶವನ್ನು ಮಾಡಲಿದ್ದಾರೆ. ದಸರಾ ಮಾದರಿಯಲ್ಲಿ ಅರ್ಥಪೂರ್ಣವಾಗಿ ಪುರ ಪ್ರವೇಶ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮಾಜದ ಗಣ್ಯರು ಸೇರಿ ಹಲವರು ಭಾಗಿಯಾಗಲಿದ್ದಾರೆ. ಈ ಮೂಲಕ ಯಡಿಯೂರಪ್ಪ ಅವರನ್ನು ಅಭಿನಂದಿಸುವ ಅಭಿಮಾನೋತ್ಸವ ಅದ್ದೂರಿಯಿಂದ ನಡೆಯಲಿದೆ. ಬೆಳಗ್ಗೆ 11 ಗಂಟೆಗೆ ವೇದಿಕೆ ಕಾರ್ಯಕ್ರಮ ಆರಂಭವಾಗಲಿದೆ. 11:30ಕ್ಕೆ ಅಮಿತ್ ಶಾ ಆಗಮಿಸಲಿದ್ದಾರೆ. ಪ್ರತಿ ಜಿಲ್ಲೆಯ ಗ್ರಾಮಗಳಿಂದ ಜನ ಬರಲಿದ್ದಾರೆ. ಈ ಕಾರ್ಯಕ್ರಮದ ಅಧ್ಯಕ್ಷ ಪ್ರಭಾಕರ ಕೋರೆ, ಉಪಾಧ್ಯಕ್ಷ ಕಾರಜೋಳ, ಕೋಟಾ ಶ್ರೀನಿವಾಸ ಪೂಜಾರಿ ಹಾಗೂ ಶ್ರೀರಾಮುಲು ನೇತೃತ್ವ ವಹಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸದ ಗೋವಿಂದ ಕಾರಜೋಳ, ಮಾಜಿ ಶಾಸಕರಾದ ಬಿ.ಶ್ರೀರಾಮುಲು, ಆನಂದ್ ಸಿಂಗ್, ಎಂಎಲ್‌ಸಿಗಳಾದ ರವಿಕುಮ್ಕಾರ್, ಶಶಿಲ್ ನಮೋಶಿ, ಶಾಸಕ ಕೃಷ್ಣಾ ನಾಯಕ್ ಭಾಗವಹಿಸಿದ್ದರು.ಪದಾಧಿಕಾರಿಗಳು, ಕಾರ್ಯಕರ್ತರ ಸಭೆ: ಯಡಿಯೂರಪ್ಪನವರ ಕಾರ್ಯಕ್ರಮ ಯಶಸ್ವಿಗೊಳಿಸಲು ಹೊಸಪೇಟೆ ನಗರದ ಪಟೇಲ್ ನಗರದಲ್ಲಿರುವ ಬಿಜೆಪಿ ಕಚೇರಿಯಲ್ಲಿ ಬಿ.ವೈ.ವಿಜಯೇಂದ್ರ ವಿಜಯನಗರ, ಬಳ್ಳಾರಿ ಹಾಗೂ ಕೊಪ್ಪಳ ಮೂರು ಜಿಲ್ಲೆಗಳ ಬಿಜೆಪಿ ಪದಾಧಿಕಾರಿಗಳು, ಕಾರ್ಯಕರ್ತರ ಸಭೆ ನಡೆಸಿದರು.

ಸಭೆಯಲ್ಲಿ ಬಳ್ಳಾರಿ, ಕೊಪ್ಪಳ, ವಿಜಯನಗರ ಜಿಲ್ಲೆಯ ಬಿಜೆಪಿ ಪಕ್ಷದ ಹಾಲಿ, ಮಾಜಿ ಶಾಸಕರು, ಬಿಜೆಪಿ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗಿಯಾಗಿದ್ದರು. ಚಿತ್ರದುರ್ಗದಲ್ಲಿ ಮದಕರಿ ನಾಯಕ ಪುತ್ಥಳಿ ಥೀಮ್ ಪಾರ್ಕ್ ಅಪೂರ್ಣ ವಿಚಾರದಲ್ಲಿ ಅಮಿತ್ ಶಾ ಗೋ ಬ್ಯಾಕ್ ಚಳವಳಿ ವಿಚಾರವಾಗಿ ಮಾತನಾಡಿ, ಈ ಹಿಂದೆ ಭರವಸೆ ಕೊಟ್ಟಿದ್ದೆವು, ತಾವು ಗಮನಕ್ಕೆ ತಂದಿದ್ದೀರಿ. ನಾನು ಅಮಿತ್ ಶಾ ಅವರ ಗಮನಕ್ಕೆ ತರುತ್ತೇನೆ ಎಂದರು. ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರವಾಗಿ ಪ್ರತಿಕ್ರಿಯಿಸಿದ ವಿಜಯೇಂದ್ರ, ನಮ್ಮ ಹೈಕಮಾಂಡ್ ಏನು ಹೇಳುತ್ತೋ, ಅದನ್ನು ಮಾಡುತ್ತೇವೆ. ನಮ್ಮ ರಾಷ್ಟ್ರೀಯ ನಾಯಕರ ತೀರ್ಮಾನಕ್ಕೆ ಬದ್ಧರಿದ್ದೇವೆ ಎಂದು ತಿಳಿಸಿದರು.

# ಬೆಂಗಳೂರು-ಮಂಗಳೂರುಮಡ್ಗಾಂವ್ ವಂದೇಭಾರತ್ ರೈಲು ಸಂಚಾರ: ಸಚಿವ ಅಶ್ವಿನಿ ವೈಷ್ಣವ್

**ಸುಬ್ರಹ್ಮಣ್ಯ (ದಕ್ಷಿಣ ಕನ್ನಡ),ಏ.29-**ಕರಾವಳಿ ಕರ್ನಾಟಕ ಮತ್ತು ಗೋವಾವನ್ನು ವೇಗವಾಗಿ ಸಂಪರ್ಕಿಸುವ ಮಹತ್ವಾಕಾಂಕ್ಷಿ ಯೋಜನೆ ಯಾಗಿ ಪರಿಗಣಿಸಲ್ಪ ಟ್ಟಿರುವ ಬೆಂಗಳೂರುಮಂಗಳೂರುಮಡ್ಗಾಂವ್ ವಂದೇ ಭಾರತ್ ರೈಲು ಸೇವೆ ಶೀಘ್ರದಲ್ಲೇ ವಾಸ್ತವ ರೂಪ ಪಡೆಯುವ ಸಾಧ್ಯತೆ ಹೆಚ್ಚಾಗಿದೆ. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಈ ಬಗ್ಗೆ ನೀಡಿರುವ ಹೇಳಿಕೆ, ಈ ಭಾಗದ ಜನರಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ. ಇತ್ತೀಚೆಗೆ ಈ ಯೋಜನೆ ಕುರಿತು ಪ್ರತಿಕ್ರಿಯಿಸಿದ ಸಚಿವರು, ಮುಂದಿನ ಕೆಲವು ತಿಂಗಳೊಳಗೆ ಬೆಂಗಳೂರು, ಮಂಗಳೂರು ಹಾಗೂ ಮಡ್ಗಾಂವ್ ನಡುವೆ ವೇಗದ ವಂದೇ ಭಾರತ್ ರೈಲು ಸಂಚಾರ ಆರಂಭಿಸುವ ಉದ್ದೇಶ ಹೊಂದಿದ್ದೇವೆ ಎಂದು ಸ್ಪಷ್ಟಪಡಿಸಿದರು. ಹಾಸನಮಂಗಳೂರು ಮಾರ್ಗದ ವಿದ್ಯುದೀಕರಣ ಕಾಮಗಾರಿಯ ಅಂತಿಮ ಪರಿಶೀಲನೆ ನಡೆಯಬೇಕಿದ್ದು, ಅದರ ನಂತರವೇ ಸೇವೆ ಪ್ರಾರಂಭವಾಗಲಿದೆ ಎಂದು ಅವರು ತಿಳಿಸಿದರು. ಈ ರೈಲು ಯೋಜನೆ ಕರಾವಳಿ ಹಾಗೂ ಮಲೆನಾಡು ಭಾಗಗಳ ನಡುವಿನ ಸಂಚಾರ ವ್ಯವಸ್ಥೆಗೆ ಹೊಸ ಚೈತನ್ಯ ನೀಡುವ ನಿರೀಕ್ಷೆಯಿದೆ. ಈಗಾಗಲೇ ಪ್ರಮುಖ ಮಾರ್ಗಗಳಲ್ಲಿ ವಿದ್ಯುದೀಕರಣ ಪೂರ್ಣಗೊಂಡಿದ್ದು, ಪ್ರಯೋಗಾತ್ಮಕ ಸಂಚಾರ ಕಾರ್ಯಗಳೂ ಮುಂದುವರಿದಿವೆ. ಇದರಿಂದ ಯೋಜನೆ ಜಾರಿಗೆ ತರುವ ಪ್ರಕ್ರಿಯೆ ಅಂತಿಮ ಹಂತ ತಲುಪಿರುವುದು ಸ್ಪಷ್ಟವಾಗುತ್ತದೆ.

ಮಳೆಯ ಮುನ್ನವೇ ಚಾಲನೆ ಸಾಧ್ಯತೆ: ರೈಲ್ವೆ ಇಲಾಖೆಯ ಮೂಲಗಳ ಪ್ರಕಾರ, ಬಹುಕಾಲದಿಂದ ನಿರೀಕ್ಷೆಯಲ್ಲಿದ್ದ ಈ ಸೇವೆಯನ್ನು ಮಳೆಗಾಲ ಆರಂಭಕ್ಕೂ ಮುನ್ನವೇ ಸಾರ್ವಜನಿಕರಿಗೆ ಪರಿಚಯಿಸುವ ಸಾಧ್ಯತೆ ಇದೆ. ಸುರಕ್ಷತಾ ಮಾನ್ಯತೆ ಹಾಗೂ ತಾಂತ್ರಿಕ ಪರೀಕ್ಷೆಗಳು ಪೂರ್ಣಗೊಂಡ ಬಳಿಕ ಅಧಿಕೃತ ಚಾಲನೆ ನೀಡಲಾಗುವುದು.

ಪ್ರಯಾಣ ಸುಲಭ ಸಮಯ ಉಳಿತಾಯ: ಈಗಿರುವ ರಸ್ತೆ ಮಾರ್ಗಗಳು ಮಲೆನಾಡು ಪ್ರದೇಶದ ಮೂಲಕ ಸಾಗುವುದರಿಂದ ಬೆಂಗಳೂರುಮಂಗಳೂರು ನಡುವಿನ ಪ್ರಯಾಣ ಹೆಚ್ಚು ಸಮಯ ತೆಗೆದುಕೊಳ್ಳುತ್ತದೆ. ಆದರೆ ವಂದೇ ಭಾರತ್ ರೈಲು ಆರಂಭವಾದರೆ ಈ ಅವಧಿ ಗಣನೀಯವಾಗಿ ಕಡಿಮೆಯಾಗಲಿದೆ. ಇದರಿಂದ ಉದ್ಯೋಗ, ಶಿಕ್ಷಣ ಹಾಗೂ ವ್ಯಾಪಾರ ಉದ್ದೇಶದ ಪ್ರಯಾಣಿಕರಿಗೆ ಬಹು ಪ್ರಯೋಜನವಾಗಲಿದೆ. ಜೊತೆಗೆ, ಈ ಸೇವೆ ಗೋವಾದ ಮಡ್ಗಾಂವ್ ವರೆಗೆ ವಿಸ್ತರಿಸುವುದರಿಂದ ಪ್ರವಾಸೋದ್ಯಮ ಕ್ಷೇತ್ರಕ್ಕೂ ಉತ್ತೇಜನ ಸಿಗಲಿದೆ.ಪಶ್ಚಿಮಘಟ್ಟ ಹಾಗೂ ಕೊಂಕಣ ಕರಾವಳಿಯ ಮನಮೋಹಕ ನೈಸರ್ಗಿಕ ಸೌಂದರ್ಯದ ನಡುವೆ ಈ ರೈಲು ಸಂಚರಿಸುವುದರಿಂದ ಪ್ರಯಾಣಿಕರಿಗೆ ಹೊಸ ಅನುಭವ ದೊರೆಯಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

# ತಿರುಪತಿ ಲಡ್ಡು ಪ್ರಸಾದ ತಯಾರಿಕೆಗೆ ಮರಳಿದ ಕರ್ನಾಟಕದ ನಂದಿನಿ ತುಪ್ಪ

**ಬೆಂಗಳೂರು,ಏ.29-**ಬೆಲೆ ಏರಿಕೆ ಮತ್ತಿತರ್ ಕಾರಣಗಳ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಸ್ಥಗಿತಗೊಂಡಿದ್ದ ನಂದಿನಿ ತುಪ್ಪದ ಸರಬರಾಜು ಮತ್ತೆ ತಿರುಪತಿಗೆ ಆರಂಭವಾಗಿದೆ. ಬೆಂಗಳೂರು ಸಹಕಾರ ಹಾಲು ಒಕ್ಕೂಟದಿಂದ (ಬಮೂಲ್) ತಿರುಪತಿ ತಿರುಮಲ ದೇವಸ್ಥಾನಕ್ಕೆ ನಂದಿನಿ ತುಪ್ಪ ಸರಬರಾಜು ಕಾರ್ಯಕ್ರಮಕ್ಕೆ ಒಕ್ಕೂಟದ ಅಧ್ಯಕ್ಷ ಡಿ.ಕೆ.ಸುರೇಶ್ ಅವರು ಇಂದು ಬೆಂಗಳೂರು ಡೇರಿ ಆವರಣದಲ್ಲಿ ಚಾಲನೆ ನೀಡಿದರು. ಈ ವೇಳೆ ಒಕ್ಕೂಟದ ನಿರ್ದೇಶಕರುಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.




ವಿಶ್ವವಿಖ್ಯಾತ ತಿರುಪತಿ ವೆಂಕಟೇಶ್ವರ ಸ್ವಾಮಿಯ ಲಡ್ಡು ಪ್ರಸಾದ ತಯಾರಿಕೆಗೆ ಕರ್ನಾಟಕದ ಹೆಮ್ಮೆಯ ನಂದಿನಿ ತುಪ್ಪ ಮತ್ತೆ ಮರಳಿದೆ. ಬೆಲೆ ಏರಿಕೆ ಸೇರಿದಂತೆ ವಿವಿಧ ತಾಂತ್ರಿಕ ಕಾರಣಗಳಿಂದಾಗಿ ಕಳೆದ ಕೆಲವು ಸಮಯದಿಂದ ನಂದಿನ್ ತುಪ್ಪದ ಸರಬರಾಜು ಸ್ಥಗಿತಗೊಂಡಿತ್ತು. ಸರಬರಾಜು ಪ್ರಕ್ರಿಯೆಗೆ ಅಧಿಕೃತವಾಗಿ ಮರುಚಾಲನೆ ನೀಡಲಾಗಿದೆ.

ತಿರುಪತಿ ತಿಮ್ಮಪ್ಪನ ಲಡ್ಡು ಪ್ರಸಾದದ ಸ್ವಾದ ಮತ್ತು ಗುಣಮಟ್ಟಕ್ಕೆ ನಂದಿನಿ ತುಪ್ಪವೇ ಮೂಲಾಧಾರ ಎನಿಸಿದೆ. ಆದರೆ, ಬೆಲೆ ಏರಿಕೆ ಮತ್ತಿತರ ಕಾರಣಗಳಿಂದಾಗಿ ಕೆಎಂಎಫ್ ಹಾಗೂ ಟಿಟಿಡಿ ನಡುವಿನ ತುಪ್ಪ ಸರಬರಾಜು ಒಪ್ಪಂದ ತಾತ್ಕಾಲಿಕವಾಗಿ ಸ್ಥಗಿತಗೊಂಡಿತ್ತು.

ಆದರೆ ಎರಡೂ ಸಂಸ್ಥೆಗಳ ನಡುವಿನ ಮಾತುಕತೆ ಯಶಸ್ವಿಯಾಗಿದ್ದು, ತಿರುಮಲ ದೇವಸ್ಥಾನಕ್ಕೆ ನಂದಿನಿ ತುಪ್ಪದ ಲಾರಿಗಳು ಮತ್ತೆ ಪ್ರಯಾಣ ಬೆಳೆಸಲಿವೆ. ಇಂದು ಕರ್ನಾಟಕ ಹಾಲು ಮಹಾಮಂಡಳಿ ವತಿಯಿಂದ ತಿರುಪತಿಗೆ ನಂದಿನಿ ತುಪ್ಪ ಹೊತ್ತ ಲಾರಿಗಳ ಸರಬರಾಜಿಗೆ ಹಸಿರು ನಿಶಾನೆ ತೋರಿಸಲಾಯಿತು. ಈ ಸಂದರ್ಭದಲ್ಲಿ ಕೆಎಂಎಫ್ ಅಧಿಕಾರಿಗಳು ಮಾತನಾಡಿ, ತಿರುಪತಿ ಲಡ್ಡುವಿನ ಪವಿತ್ರತೆಗೆ ಹಾಗೂ ಗುಣಮಟ್ಟಕ್ಕೆ ನಂದಿನಿ ತುಪ್ಪವೇ ಶ್ರೇಷ್ಠ. ಭಕ್ತರ ಅಪೇಕ್ಷೆಯಂತೆ ಮತ್ತೆ ಈ ಸೇವೆಯನ್ನು ಮುಂದುವರೆಸುತ್ತಿರುವುದು ಸಂತೋಷ ತಂದಿದೆ, ಎಂದು ತಿಳಿಸಿದರು.

ತಿರುಪತಿ ತಿಮ್ಮಪ್ಪನ ದೈವಿಕ ಸೇವೆಗಾಗಿ ನಂದಿನಿ ತುಪ್ಪದ ಸರಬರಾಜು. ಇಂದು, ಬೆಂಗಳೂರು ಡೈರಿ ಆವರಣದಿಂದ, ಬೆಂಗಳೂರು ಮಿಲ್ಕ್ ಯೂನಿಯನ್ ಲಿಮಿಟೆಡ್ ತಿರುಪತಿ ತಿಮ್ಮಪ್ಪ ದೇವಸ್ಥಾನಕ್ಕೆ ನಂದಿನಿ ತುಪ್ಪವನ್ನು ಪೂರೈಸುವ ಪವಿತ್ರ ಕಾರ್ಯವನ್ನು ಪ್ರಾರಂಭಿಸಿತು. ಶುದ್ಧತೆಗೆ ಇನ್ನೊಂದು ಹೆಸರೇ ನಂದಿನಿ ತುಪ್ಪ.

ಈ ತುಪ್ಪವನ್ನು ಈಗ ಶ್ರೀ ಶ್ರೀನಿವಾಸನ ದೈನಂದಿನ ನೈವೇದ್ಯ ಮತ್ತು ಪ್ರಸಾದದಲ್ಲಿ ಬಳಸುವುದು ನಮ್ಮ ರಾಜ್ಯದ ಅದೃಷ್ಟ ಮತ್ತು ಹೆಮ್ಮೆ. ತಿರುಪತಿ ತಿಮ್ಮಪ್ಪನ ಆಶೀರ್ವಾದ ನಮ್ಮ ಎಲ್ಲಾ ರೈತರ ಮೇಲಿರಲಿ, ರೈತರ ಪ್ರಯತ್ನಗಳು ಇನ್ನಷ್ಟು ಹೆಚ್ಚಾಗಲಿ ಮತ್ತು ನಮ್ಮ ನಂದಿನಿ ತುಪ್ಪದ ಉತ್ಪಾದನೆಯೂ ಏರಿಕೆಯಾಗಲಿ ಎಂದು ನಾನು ಬಯಸುತ್ತೇನೆ ಎಂದು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

# ಪ್ರಮಾಣಪತ್ರ ವಿತರಿಸಲು ನಿರ್ದೇಶನ ಕೋರಿ ಅರ್ಜಿ: ಕೇಂದ್ರ, ರಾಜ್ಯ ಸರ್ಕಾರಕ್ಕೆ ನೋಟಿಸ್

**ಬೆಂಗಳೂರು,ಏ.29-**ನಗರದ ದೊಡ್ಡಗುಬ್ಬಿ ಗ್ರಾಮದಲ್ಲಿರುವ ನ್ಯೂ ಆರ್ಕ್ ಮಿಷನ್ ಆಫ್ ಇಂಡಿಯಾ ಸಂಸ್ಥೆಯಲ್ಲಿರುವ ಮನೋ ಸಾಮಾಜಿಕ (ಸೈಕೋಸೋಸಿಯಲ್) ಮಹಿಳೆಯರು, ವಿಕಲಚೇತನರಿಗೆ ಗುರುತಿನ ಚೀಟಿ ಹಾಗೂ ಅಂಗವೈಕಲ್ಯತೆಯ ಪ್ರಮಾಣ ಪತ್ರ ವಿತರಿಸುವ ವಿಚಾರವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಸುಪ್ರೀಂಕೋರ್ಟ್ ವಕೀಲರಾದ ಉತ್ತರ ಪ್ರದೇಶದ ಚಂದ್ರಿಕಾ ಉಪಾಧ್ಯಾಯ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಅವರಿದ್ದ ನ್ಯಾಯಪೀಠ, ಕೇಂದ್ರ ಮತ್ತು ರಾಜ್ಯ ಸರ್ಕಾರ ಹಾಗೂ ನ್ಯೂ ಆರ್ಕ್ ಮಿಷನ್ ಆಫ್ ಇಂಡಿಯಾ ಸೇರಿದಂತೆ ಎಲ್ಲಾ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿದೆ.

ವಿಕಲಚೇತನರ ಅಧಿನಿಯಮಗಳ-2017 ಸೆಕ್ಷನ್ 17ರ ಪ್ರಕಾರ ಅಂಗವೈಕಲ್ಯ ಪ್ರಮಾಣಪತ್ರ ವಿತರಿಸಲು ಕಡ್ಡಾಯವಾಗಿ ಗುರುತಿನ ಮತ್ತು ನಿವಾಸ ದೃಢೀಕರಣ ಪತ್ರ ಒದಗಿಸಬೇಕು. ದೇಶದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶದ ಹಲವು ಸಂಸ್ಥೆಗಳಲ್ಲಿರುವ ವಿಕಲಚೇತನರಿಗೆ ಆಧಾರ್ ಕಾರ್ಡ್ ಇಲ್ಲದ ಕಾರಣ ಅಂಗವೈಕಲ್ಯ ಪ್ರಮಾಣಪತ್ರ ಮತ್ತು ಗುರುತಿನ ಚೀಟಿ ವಿತರಣೆ ಆಗದಿರುವುದನ್ನು ಸುಪ್ರೀಂ ಕೋರ್ಟ್ ತಿಳಿಸಿದೆ. ಈ ಸಮಸ್ಯೆ ಪರಿಹರಿಸುವಂತೆ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಗೆ 2021ರಲ್ಲಿ ಸುಪ್ರಿಂ ಕೋರ್ಟ್ ನಿರ್ದೇಶಿಸಿತ್ತು ಎಂದು ಅರ್ಜಿಯಲ್ಲಿ ವಿವರಿಸಲಾಗಿದೆ.

ಅಲ್ಲದೆ, ನ್ಯಾಯಾಲಯದ ಆದೇಶದ ಹೊರತಾಗಿಯೂ ಕರ್ನಾಟಕದಲ್ಲಿ ಪರಿಸ್ಥಿತಿ ಬದಲಾಗಿಲ್ಲ. ಬೆಂಗಳೂರಿನ ದೊಡ್ಡಗುಬ್ಬಿ ಗ್ರಾಮದ ನ್ಯೂ ಆರ್ಕ್ ಮಿಷನ್ ಆಫ್ ಇಂಡಿಯಾ ಸಂಸ್ಥೆಯಲ್ಲಿ ಮನೋಸಾಮಾಜಿಕ (ಸೈಕೋಸೋಸಿಯಲ್) ಮತ್ತು ಅಂಗವೈಕ್ಯಲತೆ ಎದುರಿಸುತ್ತಿರುವ 900ಕ್ಕೂ ಅಧಿಕ ಮಹಿಳೆಯರು ಮತ್ತು ವ್ಯಕ್ತಿಗಳಿದ್ದಾರೆ. ಅವರ ಪೈಕಿ ಅನೇಕರಿಗೆ ಅಂಗೈಕಲ್ಯತೆಯ ಪ್ರಮಾಣಪತ್ರ, ಮತ್ತು ಮೂಲ ಗುರುತಿನ ಚೀಟಿಗಳೇ ಇಲ್ಲ.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L